
ಯುವ ಸ್ಪೂರ್ತಿ



"ಯಾವ ಕೆಲಸವೂ ನಿಮಗೆ ಯಾವ ಹೋರಾಟವನ್ನೂ ತರುವುದಿಲ್ಲ ಅವುಗಳ ಬಹುಪರಾಕ್ರಿತಿಗೆ ಏನೂ ಮಾಡಬೇಡಿ."
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 201 | ಭಾನುವಾರ : 25-05-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 201 | SUNDAY : 25-05-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


# ರಾಜ್ಯದಲ್ಲಿ ಮತ್ತೊಮ್ಮೆ ಕೋವಿಡ್ ಅಗ್ನಿ ಪರೀಕ್ಷೆ

**ಬೆಂಗಳೂರು,ಮೇ.25–** ರಾಜ್ಯದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದು, ಇಂದಿನಿಂದ ಕೋವಿಡ್ ಪರೀಕ್ಷೆಯನ್ನು ಆರಂಭಿಸಲು ಮುಂದಾಗಿದೆ.

ಕಳೆದ ಕೆಲ ದಿನಗಳಿಂದ ರಾಜ್ಯದಲ್ಲಿ ಕೋವಿಡ್ ಸೋಂಕು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ನಿನ್ನೆ ಸಭೆ ನಡೆಸಿದ್ದ ಕೋವಿಡ್ ತಾಂತ್ರಿಕ ಸಮಿತಿ ಕೋವಿಡ್ ಪರೀಕ್ಷೆಗಳನ್ನು ಪುನಾರಂಭಿಸಲು ಶಿಫಾರಸ್ಸು ಮಾಡಿದ್ದು, ಅದರಂತೆ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಟೆಸ್ಟ್‌ಗಳನ್ನು ಆರಂಭಿಸಲು ಮುಂದಾಗಿದ್ದು, ಪರೀಕ್ಷೆ ಲ್ಯಾಬ್‌ಗಳನ್ನು ಪುನಾರಂಭಿಸಲು ನಿರ್ಧರಿಸಿದೆ.

ರಾಜ್ಯದ ವಿವಿಧೆಡೆ 8 ಆರ್‌ಟಿಪಿಸಿಆರ್ ಪರೀಕ್ಷೆ ಲ್ಯಾಬ್‌ಗಳನ್ನು ಆರಂಭಿಸುವ ನಿರ್ಧಾರ ಮಾಡಲಾಗಿದೆ. ರಾಜ್ಯದ ಆಯ್ದ ಸರ್ಕಾರಿ ಆಸ್ಪತ್ರೆ, ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಜಿಲ್ಲಾಸ್ಪತ್ರೆಗಳಲ್ಲಿ ಕೋವಿಡ್ ಪರೀಕ್ಷೆಗಳ ಆರಂಭಕ್ಕೆ ಸಿದ್ಧತೆ ನಡೆದಿದ್ದು, ಇಂದಿನಿಂದಲೇ ಕೋವಿಡ್ ಪರೀಕ್ಷೆಗಳು ಆರಂಭವಾಗಲಿದೆ.

ಸಾರಿ ಕೇಸ್‌ಗಳಿಗೆ ಪರೀಕ್ಷೆ ಕಡ್ಡಾಯ



ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಳ ವಾಗುತ್ತಿರುವ ಹಿನ್ನೆಲೆಯಲ್ಲಿ ಆರಂಭಿಕವಾಗಿ ಉಸಿರಾಟದ ತೊಂದರೆ, ಇತರೆ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಕೋವಿಡ್ ಪರೀಕ್ಷೆಯನ್ನು ಕಡ್ಡಾಯ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದ್ದು, ಈ ಬಗ್ಗೆ ಇಂದು ಸಂಜೆಯೊಳಗೆ ಸುತ್ತೋಲೆಯನ್ನು ಹೊರಡಿಸಲಾಗುವುದು, ಆರೋಗ್ಯ ಇಲಾಖೆಯ ಮೂಲಗಳು ತಿಳಿಸಿವೆ.

ರಾಜ್ಯದಲ್ಲಿ ಇದುವರೆಗೂ 35 ಕೋವಿಡ್ ಸಕ್ರಿಯ ಪ್ರಕರಣಗಳಿದ್ದು, ಅದರಲ್ಲಿ ಬೆಂಗಳೂರಿನಲ್ಲೇ 32 ಕೋವಿಡ್ ಪ್ರಕರಣಗಳು ದೃಢಪಟ್ಟಿದ್ದು, ಸಹ ಬೆಂಗಳೂರಿನಲ್ಲಿ ಮೂವರಿಗೆ ಕೋವಿಡ್ ಪ್ರಕರಣಗಳು ದೃಢಪಟ್ಟಿವೆ ಎಂದು ಹೇಳಲಾಗಿದೆ.

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಾದ ಹಿನ್ನೆಲೆಯಲ್ಲಿ ಕೊರೊನಾ ನಿಯಂತ್ರಣ ಸಂಬಂಧ ಕೈಗೊಳ್ಳಲು ರಚಿಸಲಾಗಿರುವ ತಾಂತ್ರಿಕ ಸಮಿತಿ ನಿನ್ನೆ ಸಭೆ ನಡೆಸಿ ಕೊರೊನಾ ಸೋಂಕು ಹೆಚ್ಚಳದ ಬಗ್ಗೆ ಸುದೀರ್ಘವಾಗಿ ಚರ್ಚೆ ನಡೆಸಿದೆ. ಇಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಹ ಆರೋಗ್ಯ ಇಲಾಖೆಯ ಅಧಿಕಾರಿಗಳ ಜತೆ ಸಭೆ ನಡೆಸಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚೆ ನಡೆಸಿದರು.

**ಮಾರ್ಗಸೂಚಿ ಬಿಡುಗಡೆ, ಮಾಸ್ಕ್ ಧರಿಸಲು ಸಲಹೆ**

ದೇಶದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದು, ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮಾಸ್ಕ್ ಧರಿಸಿ ಓಡಾಡುವಂತೆ ಹಾಗೂ ನೈರ್ಮಲ್ಯ ಕಾಪಾಡಲು ಸ್ಯಾನಿಟೈಸರ್‌ಗಳನ್ನು ಬಳಸುವಂತೆ ಸಾರ್ವಜನಿಕರಿಗೆ ಸಲಹೆ ಮಾಡಿದೆ.

ದೇಶದಲ್ಲಿ ಕೋವಿಡ್ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿದ್ದು ಮಹಾರಾಷ್ಟ್ರದಲ್ಲಿ ಮೂರು ಮಂದಿ ಕೋವಿಡ್‌ಗೆ ಬಲಿಯಾಗಿದ್ದಾರೆ ಎಂದು ಹೇಳಲಾಗಿದ್ದು ಮಹಾರಾಷ್ಟ್ರ, ದೆಹಲಿ, ಆಂಧ್ರಪ್ರದೇಶ,

2ನೇ ಪುಟಕ್ಕೆ

## ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿಗೆ ಅರ್ಜಿ ಅಹ್ವಾನ



**ಯುವ ಮಾರ್ಗ ಸುದ್ದಿ**
**ಮಾನ್ವಿ,ಮೇ.25–**ಬೆಂಗಳೂರಿನ ವಾಸವಿ ಆಕಾಡೆಮಿ ವತಿಯಿಂದ ಸಮಾಜದ ಎಲ್ಲಾ ಸಮುದಾಯಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಆರ್ಯವೈಶ್ಯ ಮಹಾಸಭಾ ರಾಜ್ಯಾಧ್ಯಕ್ಷರಾದ ಪಿ.ರವಿಶಂಕರ ಅವರ ಮಾರ್ಗದರ್ಶನದಲ್ಲಿ 2026ರ ಸಾಲಿನಲ್ಲಿ ನಡೆಯುವ ಐ.ಎ.ಎಸ್, ಐ.ಪಿ.ಎಸ್, ಹಾಗೂ ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಯುವ ವಿವಿಧ ಸ್ಪರ್ಧಾತ್ಮಕ, ಆಡಳಿತಾತ್ಮಕ ಪ್ರವೇಶ ಪರೀಕ್ಷೆಗಳಿಗೆ ಆಸಕ್ತ ಯಾವುದೇ ಪದವೀಧರ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿಯೊಂದಿಗೆ 6 ತಿಂಗಳ ಅವಧಿಯ ತರಬೇತಿಯನ್ನು ಬೆಂಗಳೂರಿನ ವಿಜಯನಗರದಲ್ಲಿರುವ ವಾಸವಿ ಆಕಾಡೆಮಿ ವತಿಯಿಂದ ನೀಡಲಾಗುವುದು .ಪ್ರವೇಶವು ವಾಸವಿ ಆಕಾಡೆಮಿ ವತಿಯಿಂದ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ತೇರ್ಗಡೆಯಾದವರಿಗೆ ಮಾತ್ರ ಇರುತ್ತದೆ. ಇದುವರೆಗೂ ವಾಸವಿ ಸಮಾಜದ ಅಭಿವೃದ್ಧಿಗಾಗಿ ಆರ್ಯವೈಶ್ಯ ಮಹಾಸಭಾ ವತಿಯಿಂದ 20 ಕ್ಕೂ ಹೆಚ್ಚು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದ್ದು ಪ್ರತಿ ತಿಂಗಳು ಅಂದಾಜು 1800 ಕ್ಕೂ ಹೆಚ್ಚು ಕುಟುಂಬಗಳು ಈ ಯೋಜನೆಯ ಲಾಭವನ್ನು ಪಡೆಯುತ್ತಿವೆ. ಸಮುದಾಯದ ಜೋತೆಗೆ ಸಮಾಜದ ಇತರೆ ಸಮುದಾಯದವರಿಗೆ ಅನುಕೂಲವಾಗಲಿ ಎನ್ನುವ ಉದ್ದೇಶದಿಂದ ತರಬೇತಿಯನ್ನು ನೀಡಲಾಗುತ್ತಿದೆ ಆಸಕ್ತರು ಅರ್ಜಿಗಳನ್ನು ಸಲ್ಲಿಸುವುದಕ್ಕೆ ಮಾನ್ವಿ ನಗರೇಶ್ವರ ಆರ್ಯವೈಶ್ಯ ಸಂಘದ ಅಧ್ಯಕ್ಷರನ್ನು ಹಾಗೂ ಕಾರ್ಯದರ್ಶಿಗಳನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದು ಹಾಗೂ ದೂ. ಸಂಖ್ಯೆ 9663900439,9916116615, 9901794035, 984568808 ಸಂಪರ್ಕಿಸಬಹುದಾಗಿದೆ ಎಂದು ಮಾನ್ವಿ ನಗರೇಶ್ವರ ಆರ್ಯವೈಶ್ಯ ಸಂಘದ ತಾ.ಅಧ್ಯಕ್ಷರಾದ ಆರ್. ಮುತ್ತುರಾಜ್ ಶೆಟ್ಟಿ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಆಪರೇಷನ್ ಸಿಂಧೂರ್ : ಭಾರತದ ಬೆಂಬಲಕ್ಕೆ ನಿಂತ ಜರ್ಮನಿ

ಬರ್ಲಿನ್, ಮೇ 25– ಜರ್ಮನ್ ಕೌನ್ಸಿಲ್ ಆನ್ ಫಾರಿನ್ ರಿಲೇಶನ್ಸ್ ನಲ್ಲಿ ನಡೆದ ಸಂವಾದದಲ್ಲಿ, ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಇತ್ತೀ?ಚಿನ ಪಹಲ್ಗಾಮ್ ಭಯೋತ್ಪಾದಕ ದಾಳಿ, ನಂತರದ ಆಪರೇಷನ್ ಸಿಂಧೂರ್ ಮತ್ತು ಅದಕ್ಕೆ ದೊರೆತ ಬಲವಾದ ಅಂತರರಾಷ್ಟ್ರಿ?ಯ ಬೆಂಬಲ, ವಿಶೇಷವಾಗಿ ಜರ್ಮನಿಯಿಂದ ಪಡೆದ ಬಲವಾದ ಬೆಂಬಲದ ಕುರಿತು ಮಾತನಾಡಿದರು.

ಈ ವಿಷಯವನ್ನು ಪ್ರಸ್ತಾಪಿಸುತ್ತಾ ಅವರು, ಇಂದು ಭಯೋತ್ಪಾದನೆಯ ವಿಷಯಕ್ಕೆ ಬಂದರೆ, ಭಯೋತ್ಪಾದನೆಯನ್ನು ಅನುಮೋದಿಸುತ್ತೆ?ವೆ ಮತ್ತು ಅದನ್ನು ಖಂಡಿಸುವುದಿಲ್ಲ ಎಂದು ಹೇಳುವ ಯಾವುದೇ ದೇಶವಿಲ್ಲ.ನನ್ನನ್ನು, ನನ್ನ ಜನರನ್ನು ಮತ್ತು ನನ್ನ ದೇಶವನ್ನು ಸುರಕ್ಷಿತಗೊಳಿಸುವ ಹಕ್ಕನ್ನು ನಾನು ಹೊಂದಿದ್ದೇನೆ ಎಂದು ನಾನು ಹೇಳಿದರೆ,



ಪ್ರಪಂಚದ ಬಹುಪಾಲು ಜನರು ನನ್ನೊಂದಿಗೆ ಒಪ್ಪುತ್ತಾರೆ. ಜರ್ಮನಿ ಕೂಡ ಒಪ್ಪುತ್ತದೆ ಎಂದಿದ್ದಾರೆ.

ಭಯೋತ್ಪಾದಕ ದಾಳಿಯ ಆರಂಭಿಕ ಖಂಡನೆ ಹಾಗೂ ಮೇ 7 ರಂದು ಮತ್ತು ಇಂದು ಸಚಿವ ವಡೇಫುಲ್ ಅವರಿಂದ ಜರ್ಮನಿಯು ತನ್ನನ್ನು ತಾನು ರಕ್ಷಿಸಿಕೊಳ್ಳುವ ಭಾರತದ ಹಕ್ಕನ್ನು ಗುರುತಿಸುತ್ತದೆ ಎಂಬ ಸ್ಪಷ್ಟ ಸಂದೇಶದಿಂದ ನಾವು ಪ್ರೋತ್ಸಾಹಿಸಲ್ಪಟ್ಟಿದ್ದೇವೆ ಎಂದು ಹೇಳಿದರು.ಭಯೋತ್ಪಾದನಾ ದಾಳಿಯ ಸ್ವರೂಪವನ್ನು ಅವರು ಮತ್ತಷ್ಟು ವಿವರಿಸುತ್ತಾ, ಇದು ಭಯೋತ್ಪಾದಕ ದಾಳಿಯಾಗಿದ್ದು, ಇದು ಜಮ್ಮು ಮತ್ತು ಕಾಶ್ಮಿ?ರವನ್ನು ಮಾತ್ರವಲ್ಲದೆ ಭಾರತದ ಇತರ ಭಾಗಗಳನ್ನು ಸಹ ಗುರಿಯಾಗಿಸಿಕೊಂಡಿರುವ ಮಾದರಿಯ ಭಾಗವಾಗಿದೆ. ಇದು ಭಯದ ಮನೋವಿಕಾರವನ್ನು ಸೃಷ್ಟಿಸಲು, ಕಾಶ್ಮಿ?ರದ ಪ್ರವಾಸೋದ್ಯಮ ಆರ್ಥಿಕತೆಯನ್ನು ನಾಶಮಾಡಲು ಮತ್ತು ಧಾರ್ಮಿಕ ವೈಷಮ್ಯವನ್ನು ಬಿತ್ತಲು ಉದ್ದೇಶಿಸಲಾಗಿತ್ತು.

ನಾವು ಭಯೋತ್ಪಾದನೆಗೆ ಪ್ರತಿಕ್ರಿಯಿಸುತ್ತಿದ್ದೆವು, ಮತ್ತು ನಾವು ಪ್ರತಿಕ್ರಿಯಿಸಿದಾಗ, ಸಾಕಷ್ಟು ಅಂತರರಾಷ್ಟ್ರೀಯ ತಿಳುವಳಿಕೆ ಇತ್ತು. ನಾವು ಭಯೋತ್ಪಾದಕ ಪ್ರಧಾನ ಕಚೇರಿಗಳು ಮತ್ತು ಭಯೋತ್ಪಾದಕ ತಾಣಗಳನ್ನು ಗುರಿಯಾಗಿಸಿಕೊಂಡಿದ್ದೇವೆ.

2ನೇ ಪುಟಕ್ಕೆ

## ಮಾನಸಿಕ ರೋಗಿಗಳಿಗೆ ಅಗತ್ಯ ಚಿಕಿತ್ಸೆಯನ್ನು ಕೊಡಿಸಿ: ಡಾ.ಗುರುನಾಥ



**ಯುವ ಮಾರ್ಗ ಸುದ್ದಿ**
**ಮಾನ್ವಿ,ಮೇ.25–** ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ, ರಾಯಚೂರು ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ರಾಯಚೂರು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವ ಸ್ಕೀಜೋಪ್ರಿನಿಯಾ ದಿನಾಚರಣೆ ಕಾರ್ಯಕ್ರಮಕ್ಕೆ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ. ಗುರುನಾಥ ರೆಡ್ಡಿ ಚಾಲನೆ ನೀಡಿ ಮಾತನಾಡಿ, ಪ್ರತಿ ವರ್ಷ ಮೇ.24 ರಂದು ವಿಶ್ವ ಸ್ಕೀಜೋಪ್ರಿನಿಯಾ ದಿನವನ್ನಾಗಿ ಆಚರಣೆ ಮಾಡಲಾಗುತ್ತದೆ ವಿಶ್ವ ಆರೋಗ್ಯ ಸಂಸ್ಥೆಯ ಸಮೀಕ್ಷೆಯಂತೆ ವಿಶ್ವದಾದ್ಯಂತ 21 ದಶಲಕ್ಷ ಕ್ಕೂ ಹೆಚ್ಚು ಜನರು ಸ್ಕೀಜೋಪ್ರಿನಿಯಾ ಗಂಭೀರ ಮಾನಸಿಕ ಕಾಯಿಲೆಯಿಂದ ಬಳಲುತ್ತಿದ್ದಾರೆ ಎಂದು ಕಂಡು ಬಂದಿದೆ ಅದ್ದರಿಂದ ಮಾನಸಿಕ ಕಾಯಿಲೆಗಳ ಬಗ್ಗೆ ಭಯಪಡದೆ. ರೋಗಿಗಳಿಗೆ ಸರಿಯಾದ ಚಿಕಿತ್ಸೆಯನ್ನು ಕೊಡಿಸಿ ಉತ್ತಮ ಪರಿಸರ ನಿರ್ಮಾಣ ಮಾಡುವುದರಿಂದ ರೋಗಿಗಳ ಮನಃಪರಿವರ್ತನೆ ಮಾಡುವುದಕ್ಕೆ ಸಾಧ್ಯವಾಗುತ್ತದೆ. ಮಾನಸಿಕ ಖಾಯಿಲೆಗಳಿಗೆ ಚಿಕಿತ್ಸೆ ಪಡೆಯಲು ಕೆಲವರಿಗೆ ಮುಜುಗರ ಉಂಟಾಗುವುದು ಅಂತವರು ಟೆಲಿ ಮನಸ್ಸು. 14416 ಗೆ ಕರೆ ಮಾಡಬಹುದು ಹಾಗೂ ಈ ಸಂಜೀವಿನಿ ಮೂಲಕ ಆನ್ಲೈನ್ ಕರೆ ಮಾಡಿ ಚಿಕಿತ್ಸೆ ಪಡೆಯಬಹುದು ಎಂದು ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಮಾತನಾಡಿ, ಸ್ಕೀಜೋಪ್ರಿನಿಯಾ ಗಂಭೀರ ಮಾನಸಿಕ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳಲ್ಲಿನ ಮನಸ್ಥಿತಿಯು ಕ್ಷಣ ,ಕ್ಷಣಕ್ಕೂ ಬದಲಾಗುತ್ತದೆ ಅಂತಹ ವ್ಯಕ್ತಿಗಳನ್ನು ವೈದ್ಯರಲ್ಲಿ ಕರೆತಂದು ಅಗತ್ಯ ಚಿಕಿತ್ಸೆಯನ್ನು ಕೊಡಿಸಬೇಕು. ಸಮುದಾಯ ಮಟ್ಟದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳು ಮತ್ತು ಪ್ರಾಥಮಿಕ ಆರೋಗ್ಯ ನಿರೀಕ್ಷಣಾ ಅಧಿಕಾರಿಗಳು ಸ್ಕೀಜೋಪ್ರಿನಿಯಾ ರೋಗಿಗಳನ್ನು ಪತ್ತೆ ಹಚ್ಚಿ ಮಾನಸಿಕ ತಜ್ಞರಿಂದ ಚಿಕಿತ್ಸೆ ಕೊಡಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿ ಹನುಮಂತು,ಪಾಂಡು, ಮಂಜುಳಾ, ಜ್ಞಾನೇಶ ಆರೋಗ್ಯ ನಿರೀಕ್ಷಣಾಧಿಕಾರಿಯಾದ ಗುರುಶರಣ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಚೈತ್ರ, ರೇಣುಕಾ, ಮಂಜುಳಾ , ಬಸ್ಸಮ್ಮ ಸೇರಿದಂತೆ ಸಾರ್ವಜನಿಕರು ಭಾಗವಹಿಸಿದ್ದರು

## ಸಿಇಟಿ ಫಲಿತಾಂಶ ಪ್ರಕಟ

# ಕೃಷಿಯಲ್ಲಿ ಅಕ್ಷಯ್,ನರ್ಸಿಂಗ್‌ನಲ್ಲಿ ಹರೀಶ್ ರಾಜ್‌ಗೆ ಪ್ರಥಮ ಸ್ಥಾನ

**ಬೆಂಗಳೂರು, ಮೇ 25–** ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿ ಶಿಕ್ಷಣ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ್ದ ಸಾಮಾನ್ಯ ಪ್ರವೇಶ ಪರೀಕ್ಷೆಯ (ಸಿಇಟಿ) ಫಲಿತಾಂಶ ಇಂದು ಪ್ರಕಟಿಸಲಾಗಿದೆ.

ಸಿಇಟಿ ಎಂಜಿನಿಯರಿಂಗ್ ವಿಭಾಗದಲ್ಲಿ ಬೆಂಗಳೂರಿನ ಮಾರತಹಳ್ಳಿ ಚೈತ್ಯನ್ಯ ಸಿಬಿಎಸ್‌ಇ ಶಾಲೆಯ ಭವೇಶ್ ಜಯಂತಿ ಅವರು ಶೇ. 99.06 ಗಳಿಸುವ ಮೂಲಕ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದಿದ್ದಾರೆ. ಕೃಷಿಯಲ್ಲಿ ಅಕ್ಷಯ್ ಎಂ ಹೆಗಡೆ, ನರ್ಸಿಂಗ್ ವಿಭಾಗದಲ್ಲಿ ಹರೀಶ್ ರಾಜ್ ಪ್ರಥಮ ಸ್ಥಾನ ಪಡೆದಿದ್ದಾರೆ.

ಅದೇ ರೀತಿ, ಚೈತನ್ಯ ಟೆಕ್ನೋ ಸ್ಕೂಲ್, ಕನಕಪುರ ರಸ್ತೆ ಉತ್ತರಹಳ್ಳಿಯ ವಿದ್ಯಾರ್ಥಿ ಸಾತ್ವಿಕ್ ಬಿರಾದರ್ ಶೇ. 98.83 ರಷ್ಟು ಗಳಿಸುವ ಮೂಲಕ ಎರಡನೇ ರ್‍ಯಾಂಕ್ ಗಳಿಸಿದ್ದಾರೆ.

ಚೈತನ್ಯ ಟೆಕ್ನೋ ಸ್ಕೂಲ್, ಮುನೇನಕೊಳಲ ಮರತಹಳ್ಳಿ ಬೆಂಗಳೂರಿನ ದಿನೇಶ್ ಗೊಂತಿ ಅರುಣಾಚಲಂ ಸಿಬಿಎಸ್‌ಸಿ



ಕರ್ನಾಟಕ ಶೇ. 98.67 ಗಳಿಸುವ ಮೂಲಕ ರಾಜ್ಯಕ್ಕೆ ಮೂರನೇ ಸ್ಥಾನ ಗಳಿಸಿದ್ದಾರೆ.

ನಗರದಲ್ಲಿಂದು ಮಲ್ಲೇಶ್ವರಂನ 18ನೇ ಅಡ್ಡರಸ್ತೆಯಲ್ಲಿರುವ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಕಚೇರಿಯಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಫಲಿತಾಂಶ ಪ್ರಕಟಿಸಿ, ಸಿಇಟಿ ಪರೀಕ್ಷೆಗೆ 3.30 ಲಕ್ಷ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದರು. ಅವರ ಪೈಕಿ 3.11 ಲಕ್ಷ ವಿದ್ಯಾರ್ಥಿಗಳು ಹಾಜರಾಗಿದ್ದರು ಎಂದು ಮಾಹಿತಿ ನೀಡಿದರು.

ಈ ಬಾರಿ ಪರೀಕ್ಷಾ ಅಕ್ರಮ ತಡೆಯಲು ಈ ಭಾರಿ ಫೇಸ್ ರೆಗ್ನನೇಷನ್ ಬಳಕೆ ಮಾಡಲಾಗಿತ್ತು. ವೆಬ್ ಕಾಸ್ಟಿಂಗ್ ಮೂಲಕ ಪರೀಕ್ಷೆ ನಡೆಸಲಾಗಿದೆ. ಇನ್ನು ಭೌತಶಾಸ್ತ್ರ ವಿಷಯದಲ್ಲಿ ಒಂದು ಗ್ರೇಸ್ ಮಾರ್ಕ್ ಅಂಕ ಕೊಡಲಾಗಿದೆ ಎಂದು ಉಲ್ಲೇಖಿಸಿದರು.

ರಸಾಯನಶಾಸ್ತ್ರದಲ್ಲಿ ಎರಡು ಹಾಗೂ ಜೀವಶಾಸ್ತ್ರದಲ್ಲಿ ಒಂದು ಸರಿ ಉತ್ತರ ಕೊಡಲಾಗಿದೆ. ಇದೇ ಮೊದಲ ಭಾರಿಗೆ ಓಎಂಆರ್ ಶೀಟ್‌ನ್ನು ವೆಬ್ ಸೈಟ್‌ಗೆ ಅಪ್ಲೋಡ್ ಮಾಡಲಾಗಿತ್ತು ಎಂದೂ ಅವರು ಹೇಳಿದರು.

ಏ.16ರಂದು ಭೌತ ವಿಜ್ಞಾನ ಮತ್ತು ರಸಾಯನ ವಿಜ್ಞಾನ, ಏ.17ರಂದು ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಪರೀಕ್ಷೆಗಳನ್ನು 775 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗಿತ್ತು.

ದ್ವಿತೀಯ ಪಿಯು ಪರೀಕ್ಷೆ–1 ಮತ್ತು ಪರೀಕ್ಷೆ–2, ಸಿಬಿಎಸ್‌ಇ, ಐಸಿಎಸ್‌ಇ ಫಲಿತಾಂಶ ಪ್ರಕಟವಾಗಿದ್ದು, ಅಭ್ಯರ್ಥಿಗಳು ಪಡೆದ ಅಂಕಗಳ ಕೂಡುವಿಕೆ ಕಾರ್ಯವನ್ನು ಕೆಇಎ ಪೂರ್ಣಗೊಳಿಸಿದೆ.

ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಏ. 15ರಂದು ಕನ್ನಡ ಭಾಷಾ ಪರೀಕ್ಷೆ ನಡೆಸಲಾಗಿತ್ತು. ಅವರಲ್ಲಿ ಹೆಚ್ಚಿನವರು ಕೇರಳದ ವಿದ್ಯಾರ್ಥಿಗಳು. ಈ ವಿದ್ಯಾರ್ಥಿಗಳ ಪಿಯು ಫಲಿತಾಂಶವನ್ನು ಕೇರಳ ಪದವಿಪೂರ್ವ ಶಿಕ್ಷಣ ಇಲಾಖೆ ಮೇ 21ರಂದು ಪ್ರಕಟಿಸಿದೆ. ಮೇ 23ರಂದು ಸಿಇಟಿ ಫಲಿತಾಂಶ ಪ್ರಕಟಿಸಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಕೆಲ ತಾಂತ್ರಿಕ ಕಾರಣಗಳಿಂದ ಒಂದು ದಿನ ಮುಂದೂಡಲಾಗಿತ್ತು.

**ಎಂಜಿನಿಯರಿಂಗ್**

1. ಭವೇಶ್ ಜಯಂತಿ–ಚೈತನ್ಯ ಟೆಕ್ನೋ ಸ್ಕೂಲ್ ಮಾರತಹಳ್ಳಿ 2. ಸಾತ್ವಿಕ್ ಬಿರಾದರ್– ಶ್ರೀ ಚೈತನ್ಯ ಟೆಕ್ನೋ ಸ್ಕೂಲ್ ಉತ್ತರಹಳ್ಳಿ

2ನೇ ಪುಟಕ್ಕೆ

ಮೊದಲನೇಯ ಪುಟದಿಂದ

# ರಾಜ್ಯದಲ್ಲಿ ಮತ್ತೊಮ್ಮೆ ಕೋವಿಡ್ ಪರೀಕ್ಷೆ

ಕೇರಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಈಗಾಗಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದು, ಆಂಧ್ರದಲ್ಲಿ ಮಾಸ್ಕ್ ಧರಿಸುವುದನ್ನು ಕಡ್ಡಾಯ ಮಾಡಲಾಗಿದೆ.

ದೆಹಲಿ, ಮಹಾರಾಷ್ಟ್ರದಲ್ಲೂ ಕೋವಿಡ್ ಮಾರ್ಗಸೂಚಿಗಳನ್ನು ಪ್ರಕಟಿಸಲಾಗಿದ್ದು, ಕರ್ನಾಟಕ ಸರ್ಕಾರ ಸಹ ಕೋವಿಡ್ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ರಾಜ್ಯದಲ್ಲಿ ಒಟ್ಟು 35 ಕೋವಿಡ್ ಸಕ್ರಿಯ ಪ್ರಕರಣಗಳು ದಾಖಲಾಗಿದ್ದು, ಅವುಗಳ ಪೈಕಿ 32 ಪ್ರಕರಣಗಳು ಬೆಂಗಳೂರಿನಲ್ಲಿ ದೃಢಪಟ್ಟಿವೆ.ಕೋವಿಡ್ ಪರಿಸ್ಥಿತಿ ಆತಂಕಗೊಳ್ಳುವರಷ್ಟರ ಮಟ್ಟಿಗೆ ಇಲ್ಲವಾದರೂ ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು. ಕಳೆದ 20 ದಿನಗಳಲ್ಲಿ ಏಕಾಏಕಿ ಕೋವಿಡ್ ಪ್ರಕರಣಗಳು ಹೆಚ್ಚಳ ಕಂಡು ಬಂದಿದೆ. ಹಾಗಾಗಿ, ಮಕ್ಕಳು, ವೃದ್ಧರು ಹಾಗೂ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವವರು ಮುನ್ನೆಚ್ಚರಿಕೆ ವಹಿಸಬೇಕು ಎಂದು ರಾಜ್ಯ ಆರೋಗ್ಯ ಇಲಾಖೆ ಸಲಹೆ ಮಾಡಿದೆ.

ರಾಜ್ಯದಲ್ಲಿ 2025ರಲ್ಲಿ ಕೋವಿಡ್ ಸಂಬಂಧಿತ ಸಾವುಗಳು ವರದಿಯಾಗಿಲ್ಲ. ಆದರೂ ಸೋಂಕು ಹರಡುವುದನ್ನು ತಡೆಯಲು ಎಚ್ಚರಿಕೆ ಅವಶ್ಯ. ಹಾಗಾಗಿ ಗರ್ಭಿಣಿಯರು, ಮಕ್ಕಳು, ಇತರೆ ಕಾಯಿಲೆಗಳಿಂದ ಬಳಲುತ್ತಿರುವವರು, ಮತ್ತು ರೋಗ ನಿರೋಧಕ ಶಕ್ತಿ ಕಡಿಮೆ ಇರುವವರು. ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮುಖಕ್ಕೆ ಮಾಸ್ಕ್ ಧರಿಸಿ ಓಡಾಡಲು ಆರೋಗ್ಯ ಇಲಾಖೆ ಸಲಹಾರೂಪದ ಸೂಚನೆ ನೀಡಿದೆ.

ಸಾರ್ವಜನಿಕರು ಕೈಗಳ ನೈರ್ಮಲ್ಯವನ್ನು ಕಾಪಾಡಿಕೊಳ್ಳಲು ಹ್ಯಾಂಡ್ ಸ್ಯಾನಿಟೈಸರ್‌ಗಳನ್ನು ಬಳಸಲು ಸಲಹೆ ನೀಡಲಾಗಿದೆ. ತೀವ್ರ ಉಸಿರಾಟದ ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವವರು ಸಕಾಲಿಕವಾಗಿ ಚಿಕಿತ್ಸೆಯನ್ನು ಪಡೆಯಬೇಕು. ಸಂಭಾವ್ಯ ಅಪಾಯ ತಡೆಗಟ್ಟಲು ಕೋವಿಡ್ –19 ಪರೀಕ್ಷೆಯನ್ನು ತಕ್ಷಣವೇ ಮಾಡಿಕೊಳ್ಳಲು ಸಲಹೆ ನೀಡಲಾಗಿದೆ.

### ಆತಂಕ, ಗಾಬರಿ ಬೇಡ ದಿನೇಶ್‌ಗುಂಡೂರಾವ್

ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಗಂಭೀರ ಪರಿಸ್ಥಿತಿ ಇಲ್ಲ ಯಾರೂ ಆತಂಕಕ್ಕೆ ಒಳಗಾಗುವ ಅಗತ್ಯವೂ ಇಲ್ಲ, ಸರ್ಕಾರ ಮುನ್ನೆಚ್ಚರಿಕೆಯಾಗಿ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಹಾಗೆಯೇ ಸಾರಿ ಪ್ರಕರಣಗಳಲ್ಲಿ ಕೋವಿಡ್ ಪರೀಕ್ಷೆಗಳನ್ನು ಕಡ್ಡಾಯ ಮಾಡುವಂತೆ ಸೂಚನೆ ನೀಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ದೇಶದಲ್ಲೇ ಕೋವಿಡ್‌ನ 257 ಸಕ್ರಿಯ ಪ್ರಕರಣಗಳಿವೆ ಗಂಭೀರ ಪ್ರಕರಣಗಳು ವರದಿಯಾಗಿಲ್ಲ. ಹಾಗಾಗಿ ಯಾರೂ ಭಯಪಡುವ ಅಗತ್ಯವಿಲ್ಲ. ಎಂದಿನಂತೆ ಪ್ರವಾಸ ಎಲ್ಲವನ್ನೂ ಮಾಡಬಹುದು. ರಾಜ್ಯದಲ್ಲಿ ಕಾಣಿಸಿಕೊಂಡಿರುವ ಸಕ್ರಿಯ ಪ್ರಕರಣಗಳ ತೀವ್ರತೆಯೂ ಕಡಿಮೆ ಇದೆ. ಗಾಬರಿ ಬೀಳುವ ಅಗತ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

### ಬೆಳಗಾವಿಯಲ್ಲಿ ಮೊದಲ ಕೊರೊನಾ ಪತ್ತೆ

ಗಡಿ ಜಿಲ್ಲೆ ಬೆಳಗಾವಿಯಲ್ಲಿ 25 ವರ್ಷದ ಗರ್ಭಿಣಿಯಲ್ಲಿ ಕೋವಿಡ್ ಸೋಂಕು ಕಾಣಿಸಿಕೊಂಡಿದೆ. ಸೋಂಕಿತ ಮಹಿಳೆಗೆ ಬೆಳಗಾವಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಈಶ್ವರ ಗಡಾದಿ ತಿಳಿಸಿದ್ದಾರೆ.

ದೇಶದ ವಿವಿಧೆಡೆ ಕೊರೊನಾ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸೋಂಕು ಎದುರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸರ್ಕಾರದಿಂದ ಮಾರ್ಗಸೂಚಿ ಬಂದಿದೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ತಲಾ 5 ಬೆಡ್ ಮೀಸಲಿಡಲಾಗಿದೆ ಎಂದರು.

ಕೊರೊನಾ ಸೋಂಕು ಸಂಬಂಧ ಎಲ್ಲ ರೀತಿಯ ಮುಂಜಾಗ್ರತೆ ಕೈಗೊಳ್ಳಲಾಗಿದೆ. ವೃದ್ಧರು, 1 ವರ್ಷದ ಮಕ್ಕಳು ಹಾಗೂ ಕ್ಯಾನ್ಸರ್ ಪೀಡಿತರು ಗುಂಪಿನಲ್ಲಿ ಸೇರಬಾರದು. ಅಂತರ ಕಾಯ್ದುಕೊಳ್ಳಬೇಕು. ಕೊರೊನಾ ಲಕ್ಷಣಗಳು ಕಾಣಿಸಿಕೊಂಡ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ ತೆರಳಿ ಪರೀಕ್ಷೆ ಮಾಡಿಸಿಕೊಳ್ಳುವಂತೆ ತಿಳಿಸಿದರು.

# ಸಿಇಟಿ ಫಲಿತಾಂಶ ಪ್ರಕಟ

3. ದಿನೇಶ್ ಅರುಣಾಚಲಂ– ಚೈತನ್ಯ ಟೆಕ್ನೋ ಸ್ಕೂಲ್ ಮಾರತಹಳ್ಳಿ

**ಕೃಷಿ**

1. ಅಕ್ಷಯ್ ಹೆಗ್ಡೆ– ಆಳ್ವಾಸ್ ಕಾಲೇಜ್ ಮುಡುಬಿದ್ರೆ.
2. ಶಶಿ ಪಂಡಿತ್ –ಎಕ್ಸ್‌ಪರ್ಟ್ ಪಿಯು ಕಾಲೇಜ್ ಮಂಗಳೂರು.
3. ಸುಚಿತ್ ಪಿ. ಪ್ರಸಾದ್ – ಎಕ್ಸ್‌ಪರ್ಟ್ ಪಿಯು ಕಾಲೇಜ್ ಮಂಗಳೂರು.

**ಪಶುಸಂಗೋಪನೆ**

1. ಹರೀಶ್ ರಾಜ್ ಡಿ.ವಿ – ನಾರಾಯಣ ಇ ಟೆಕ್ನೋ ಯಲಹಂಕ
2. ಆತ್ರೇಯ–NPS. ಎಚ್‌ಎಸ್‌ಆರ್ ಲೇಔಟ್
3. ಸಫಲ್.ಎಸ್. ಶೆಟ್ಟಿ – ಎಕ್ಸ್‌ಪರ್ಟ್ ಪಿಯು ಕಾಲೇಜ್ ಮಂಗಳೂರು.

**ಫಾರ್ಮ–ಡಿ**

1. ಆತ್ರೇಯ – ನ್ಯಾಷನಲ್ ಪಬ್ಲಿಕ್ ಸ್ಕೂಲ್ ಎಚ್‌ಎಸ್‌ಆರ್ ಲೇಔಟ್
2. ಭವೇಶ್ ಜಯಂತಿ – ಚೈತನ್ಯ ಟೆಕ್ನೋ ಸ್ಕೂಲ್ ಮಾರತಹಳ್ಳಿ
3. ಹರೀಶ್ ರಾಜ್ ಡಿ.ವಿ – ನಾರಾಯಣ ಇ ಟೆಕ್ನೋ ಯಲಹಂಕ

**ನರ್ಸಿಂಗ್**

1. ಹರೀಶ್ ರಾಜ್ ಡಿ.ವಿ – ನಾರಾಯಣ ಇ ಟೆಕ್ನೋ ಯಲಹಂಕ
2. ಆತ್ರೇಯ –ನ್ಯಾಷನಲ್ ಪಬ್ಲಿಕ್ ಸ್ಕೂಲ್ ಎಚ್‌ಎಸ್‌ಆರ್ ಲೇಔಟ್
3. ಸಫಲ್.ಎಸ್. ಶೆಟ್ಟಿ – ಎಕ್ಸ್‌ಪರ್ಟ್ ಪಿಯು ಕಾಲೇಜ್ ಮಂಗಳೂರು

**ಬಿ– ಫಾರ್ಮ್**

1. ಆತ್ರೇಯ – ನ್ಯಾಷನಲ್ ಪಬ್ಲಿಕ್ ಸ್ಕೂಲ್ ಎಚ್‌ಎಸ್‌ಆರ್ ಲೇಔಟ್
2. ಭವೇಶ್ ಜಯಂತಿ – ಚೈತನ್ಯ ಟೆಕ್ನೋ ಸ್ಕೂಲ್ ಮಾರತಹಳ್ಳಿ
3. ಹರೀಶ್ ರಾಜ್ ಡಿ.ವಿ – ನಾರಾಯಣ ಇ ಟೆಕ್ನೋ ಯಲಹಂಕ

# ಆಪರೇಷನ್ ಸಿಂಧೂರ್ : ಭಾರತದ ಬೆಂಬಲಕ್ಕೆ ನಿಂತ ಜರ್ಮನಿ

ನಮ್ಮ ಅಭಿಯಾನವು ಭಯೋತ್ಪಾದನೆಯ ವಿರುದ್ಧವಾಗಿದೆ, ಮತ್ತು ಈ ಸಂದರ್ಭದಲ್ಲಿ, ಭಯೋತ್ಪಾದಕರು ಪಕ್ಕದ ದೇಶದಲ್ಲಿ ನೆಲೆಸಿದ್ದಾರೆ ಏಕೆಂದರೆ ಆ ದೇಶವು ಹಲವು ವರ್ಷಗಳಿಂದ ಭಯೋತ್ಪಾದನೆಯನ್ನು ಒಂದು ಸಾಧನವಾಗಿ ಬಳಸುತ್ತಿದೆ ಎಂದರು.

ಸಚಿವರ ಹೇಳಿಕೆಗಳು ಭಯೋತ್ಪಾದನೆ ನಿಗ್ರಹದ ಬಗ್ಗೆ ಭಾರತದ ದೃಢ ನಿಲುವನ್ನು ಮತ್ತು ಅದರ ಸ್ವರಕ್ಷಣೆಯ ಹಕ್ಕು ಮತ್ತು ಭಯೋತ್ಪಾದನೆಯ ವಿರುದ್ಧ ಕ್ರಮಗಳ ಬಗ್ಗೆ, ವಿಶೇಷವಾಗಿ ಜರ್ಮನಿಯಿಂದ ಪಡೆದ ಬಲವಾದ ಅಂತರರಾಷ್ಟ್ರೀಯ ಬೆಂಬಲವನ್ನು ಎತ್ತಿ ತೋರಿಸುತ್ತವೆ.

ಭಾರತ ಮತ್ತು ಜರ್ಮನಿ ತಮ್ಮ ಕಾರ್ಯತಂತ್ರದ ಪಾಲುದಾರಿಕೆಯ 25 ವರ್ಷಗಳನ್ನು ಆಚರಿಸುತ್ತಿರುವಾಗ, ವಿದೇಶಾಂಗ ಸಚಿವ ಎಸ್ ಜೈಶಂಕರ್ ಸಹ ದ್ವಿಪಕ್ಷೀಯ ಸಂಬಂಧಗಳನ್ನು ನವೀಕರಿಸುವ ತಮ್ಮ ದೃಷ್ಟಿಕೋನವನ್ನು ಹಂಚಿಕೊಂಡರು, ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಹಲವಾರು ಪ್ರಮುಖ ಕ್ಷೇತ್ರಗಳಲ್ಲಿ ಸಹಯೋಗವನ್ನು ಸೂಚಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9972778310

# ಕಾಶ್ಮೀರ ಭಾರತದ ಅವಿಭಾಜ್ಯ ಅಂಗ




**ಸೈದಾಪುರ:ಮೇ.25–** ಪಟ್ಟಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆಯಲ್ಲಿ ಭಾಗವಹಿಸಿದ್ದ ಜನರು ದೇಶ ಭಕ್ತಿಯನ್ನು ಸಾರುವ ಘೋಷಣೆಗಳ ಜತೆಗೆ ದೂದ್ ಮಾಂಗೋ ಖೀರ್ ದೇಂಗೆ, ಕಾಶ್ಮೀರ ಮಾಂಗೋ ಚೀರ್ ದೇಂಗೆ ಎಂದು ಉದ್ಘೋಷಿಸುವ ಮೂಲಕ ಗಡಿ ಕಾಯುವ ಸೈನಿಕರ ಜತೆಗೆ ಈ ರಾಷ್ಟ್ರದ ಪ್ರತಿಯೊಬ್ಬ ನಾಗರಿಕರು ಜತೆಗಿದ್ದೇವೆ ಎಂಬ ಸಂದೇಶವನ್ನು ರವಾನಿಸಲಾಯಿತು.

ಪ್ರವಾಸಕ್ಕೆಂದು ಪಹಲ್ಗಾಮ್‌ಗೆ ತೆರಳಿದ್ದ ಅಮಾಯಕರ ಬಲಿ ಪಡೆದ ಪಾಕ್ ಪೋಷಿತ ಉಗ್ರರರನ್ನು ನಿರ್ನಾಮ ಮಾಡಲು ಭಾರತೀಯ ಸೇನೆಯ ಆಪರೇಷನ್ ಸಿಂದೂರ ವಿಜಯೋತ್ಸವದ ನಿಮಿತ್ತ ನಮ್ಮ ಸೈನಿಕರಿಗೆ ಅಭಿನಂದನೆ ಹಾಗೂ ಆತ್ಮಸ್ಥೈರ್ಯವನ್ನು ತುಂಬುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆ ಯಶಸ್ವಿಯಾಯಿತು.

ಪಟ್ಟಣದ ರೈಲು ನಿಲ್ದಾಣದಿಂದ ಹೊರಾಟ ತಿರಂಗಾ ಯಾತ್ರೆಯೂ ಬಸವೇಶ್ವರ ವೃತ್ತದ ಮೂಲಕ ಕನಕ ವೃತ್ತವನ್ನು ತಲುಪಿತು. ಕಡೇಚೂರು ಸಂಸ್ಥಾನ ಮಠದ ಗುರುಮೂರ್ತಿ ಶಿವಾಚಾರ್ಯರು, ಸಿದ್ಧ ಚೇತನಾಶ್ರಮ ಸಿದ್ದಾರೂಢ ಮಠದ ಸೋಮೇಶ್ವರಾಂದ ಸ್ವಾಮಿಗಳು, ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ಯಾದಗಿರಿ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಯುವ ಮುಖಂಡ ಮಹೇಶರೆಡ್ಡಿಗೌಡ ಮುದ್ನಾಳ, ಎಪಿಎಂಸಿ ಮಾಜಿ ಅಧ್ಯಕ್ಷ ಭೀಮನಗೌಡ ಕ್ಯಾತನಾಳ, ಪ್ರಕಾಶಗೌಡ ಸೈದಾಪುರ, ಮಲ್ಲನಗೌಡ ದುಪ್ಪಲ್ಲಿ, ನರಸಿಂಹಲು ನೀರಟ್ಟಿ, ಸುರೇಶ ಆನಂಪಲ್ಲಿ, ನಿತಿನ್ ತಿವಾರಿ, ಭೀಮಣ್ಣ ಮಡಿವಾಳ, ಮಲ್ಲರೆಡ್ಡಿ ಖಾನಾಪುರ, ಶರಣು ಯಲ್ಹೇರಿ, ಮಲ್ಲುಗೌಡ ಸೈದಾಪುರ, ಪರ್ವತರೆಡ್ಡಿ ದದ್ದಲ್, ಕೆ.ಬಿ ಗೋವರ್ಧನ್, ಗ್ರಾಪಂ ಮಾಜಿ ಅಧ್ಯಕ್ಷ ಮಾಳಪ್ಪ ಅರಕೇರಿ, ರಾಜು ದೊರೆ, ಮಲ್ಲೇಶ ನಾಯಕ ಕೂಡ್ಲೂರು, ವಿಶ್ವನಾಥ ಯಾದವ ಬದ್ದೇಪಲ್ಲಿ, ಮಧುಸೂದನರಾವ ಕುಲ್ಕರ್ಣಿ, ಹಳ್ಳೆಪ್ಪ ಕಿಲ್ಲನಕೇರಾ, ಆನಂದ ಮೀರಿಯಲ, ಸಿದ್ದು ಪೂಜಾರಿ, ಅರ್ಜುನ ಚವ್ಹಾಣ, ಜಿತೇಂದ್ರ ಬಾಡಿಯಾಳ, ಪ್ರಭು ಗೂಗಲ್, ಬಸ್ಸು ನಾಯಕ್, ಸುರೇಶ ಬೆಳಗುಂದಿ, ಸಾಗರ ಹುಲ್ಲೇರ ಸೇರಿದಂತೆ ಇತರರಿದ್ದರು. ಮಾಜಿ ಸೈನಿಕ ಮಲ್ಲರೆಡ್ಡಿಗೆ ಸನ್ಮಾನ: ಭಾರತೀಯ ಸೇನೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಪಡೆದ ಮಾಜಿ ಸೈನಿಕ ಮಲ್ಲರೆಡ್ಡಿ ಅವರನ್ನು ಸಿದ್ದಚೇತನಾಶ್ರಮ ಸಿದ್ದಾರೂಢ ಮಠದ ಪೀಠಾಧಿಪತಿ ಸೋಮೇಶ್ವರಾನಂದ ಸ್ವಾಮಿಗಳು ಸನ್ಮಾನಿಸಿದರು.

# ನನ್ನ ಮತ ಮಾರಾಟಕ್ಕಿಲ್ಲ ಮತದಾರ ಜಾಗೃತಿ ಆಂದೋಲನ

**ಕಲಬುರಗಿ,ಮೇ.25–** ನಗರದ ರಿಂಗ್ ರಸ್ತೆಯಲ್ಲಿರುವ ಕೆ.ಸಿ.ಟಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿಯಿಂದ




ನನ್ನ ಮತ ಮಾರಾಟಕ್ಕಿಲ್ಲ ಮತದಾರ ಜಾಗೃತಿ ಆಂದೋಲನ ಜರುಗಿತು.ಕಾರ್ಯಕ್ರಮವನ್ನು ಗುಲ್ಬರ್ಗಾ ವಿಶ್ವವಿದ್ಯಾಲಯದ ಶಿಕ್ಷಣ ಹಾಗೂ ಸಂಶೋಧನಾ ವಿಭಾಗದ ಮುಖ್ಯಸ್ಥ ಡಾ. ಬಾಬಣ್ಣ ಹೂವಿನಬಾವಿ ಉದ್ಘಾಟಿಸಿ ಮಾತನಾಡಿ, ಚುನಾವಣೆಗಳಲ್ಲಿ ಹಣಬಲ ಹೆಚ್ಚುತ್ತಾ ಹೋದಂತೆ ದೇಶದಲ್ಲಿ ಭ್ರಷ್ಟಾಚಾರ ಹೆಚ್ಚಳವಾಗಲಿಕ್ಕೆ ಕಾರಣವಾಗುತ್ತದೆ. ಪ್ರತಿಯೊಬ್ಬ ಮತದಾರರು ತಮ್ಮ ಮತದ ಮೌಲ್ಯವನ್ನು ಅರಿತುಕೊಂಡು ಚುನಾವಣೆಗಳಲ್ಲಿ ಸಮರ್ಥ ವ್ಯಕ್ತಿಗಳಿಗೆ ಮತ ಚಲಾಯಿಸಬೇಕು ಎಂದು ತಿಳಿಸಿದರು.

ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿಯ ಸಂಸ್ಥಾಪಕ ರಮೇಶ ಆರ್ ದುತ್ತರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಡಾ.ಶಾಂತಪ್ಪ ಸೋಮಾ ವಹಿಸಿದ್ದರು.ಮಾತನಾಡುತ್ತಾ ಪ್ರತಿಯೊಬ್ಬರು ತಪ್ಪದೇ ಮತದಾರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಹಾಗೆ ಪ್ರತಿ ಚುನಾವಣೆಯಲ್ಲಿ ಪ್ರತಿಯೊಬ್ಬರು ತಪ್ಪದೆ ಮತವನ್ನು ಚಲಾಯಿಸಬೇಕು. ಈ ಸಮಾಜವನ್ನು ಕಟ್ಟುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವವಾಗಿದ್ದು ತಾವೆಲ್ಲರೂ ಅತ್ಯಂತ ಉನ್ನತ ಗುಣಮಟ್ಟದ ಶಿಕ್ಷಕರಾಗಬೇಕು ಎಂದು ಪ್ರಶಿಕ್ಷಣಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ ಆಫ್ಶಾನ ಬೇಗಮ್, ಹಣಮಂತರಾಯ ಎಲ್ ಎಂ, ಸಯಿದಾ ಆಶನಾ ಖಮರ್, ಶಿವಕುಮಾರ. ಎಸ್ .ಎಸ್, ವಿಜಯಲಕ್ಷ್ಮಿ ವೈ, ನಾಮದೇವ ಹಾಗೂ ಬೋಧಕೇತರ ಸಿಬ್ಬಂದಿಗಳಾದ ಪ್ರಿಯಾಂಕಾ ಜಗನ್ನಾಥ, ಪ್ರೀತಿ ಪಾಟೀಲ, ಹಾಗೂ ಗೌಸೋದಿನ್ ಉಪಸ್ಥಿತರಿದ್ದರು. ಲಕ್ಷ್ಮಿ ಪ್ರಾರ್ಥನೆ ಗೀತೆ ಹಾಡಿದರು, ಶಬನಮ್ ಬೇಗಂ ಸ್ವಾಗತಿಸಿದರು. ಆಯಶಾ ಅಂಜುಮ ವಂದನಾರ್ಪಣೆ ಮಾಡಿದರು. ಸಯ್ಯದ್ ಮುಸ್ತಾಕ್ ಅಹಮದ್ ನಿರೂಪಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

# ಕೆಎಂಎಫ್ ಚುನಾವಣೆ : ಡಿ.ಕೆ.ಸುರೇಶ್ ಬೆಂಬಲಿಸಲು ಡಿಕೆಶಿ ಮನವಿ

**ಬೆಂಗಳೂರು,ಮೇ.25–** ಬಮೂಲ್ ಮತ್ತು ಕೆಎಂಎಫ್ ಚುನಾವಣೆಯಲ್ಲಿ ತನ್ನ ಸಹೋದರ ಮಾಜಿ ಸಂಸದ ಡಿ.ಕೆ.ಸುರೇಶ್ ಅವರನ್ನು ಬೆಂಬಲಿಸುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಕ್ಕಲಿಗರ ಸಂಘದ ಪದಾಧಿಕಾರಿಗಳೊಂದಿಗೆ ಮನವಿ ಮಾಡಿಕೊಂಡಿದ್ದಾರೆ.

ಒಕ್ಕಲಿಗರ ಸಂಘದ ಅಧ್ಯಕ್ಷ ಕೆಂಚಪ್ಪಗೌಡ ನೇತೃತ್ವದಲ್ಲಿ ಸಂಘದ ನಿಯೋಗ ಇಂದು ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದೆ. ಕಿಮ್ಸ್‌ನ 127 ಕೋಟಿ ರೂ. ಅಸಲು ಮತ್ತು ಬಡ್ಡಿ ಬಾಕಿ ಇದ್ದು, ಅದರಲ್ಲಿ 87 ಕೋಟಿ ರೂ. ಬಡ್ಡಿಯನ್ನು ಸರ್ಕಾರ ಮನ್ನಾ ಮಾಡಿದೆ. ಈ ಹಿನ್ನೆಲೆಯಲ್ಲಿ ಒಕ್ಕಲಿಗರ ಸಂಘ ಡಿ.ಕೆ.ಶಿವಕುಮಾರ್‌ರನ್ನು ಅಭಿನಂದಿಸಿದೆ.

ಈ ವೇಳೆ ನಿಯೋಗದ ಜೊತೆ ಮಾತುಕತೆ ನಡೆಸಿದ ಡಿ.ಕೆ.ಶಿವಕುಮಾರ್, ಪ್ರಸ್ತುತ ರಾಜಕೀಯವಾಗಿ ನಡೆಯುತ್ತಿರುವ ಹಲವು ವಿಚಾರಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಡಿ.ಕೆ.ಸುರೇಶ್ ಬೆಂಗಳೂರು ಹಾಲು ಒಕ್ಕೂಟದ ನಿರ್ದೇಶಕರ ಸ್ಥಾನಕ್ಕೆ ಕನಕಪುರ ತಾಲ್ಲೂಕಿನಿಂದ



ಸ್ಪರ್ಧೆ ಮಾಡಿದ್ದಾರೆ.

ಅವರನ್ನು ಬೆಂಬಲಿಸಿ ಗೆಲ್ಲಿಸಬೇಕು. ಮುಂದೆ ಕೆಎಂಎಫ್ ಅಧ್ಯಕ್ಷ ಚುನಾವಣೆಯಲ್ಲೂ ಬೆಂಬಲ ನೀಡಬೇಕೆಂದು ಮನವಿ ಮಾಡಿದ್ದಾರೆ. ಪದಾಧಿಕಾರಿಗಳಾದ ಡಾ.ಆಂಜನಪ್ಪ, ಎಲ್.ಶ್ರೀನಿವಾಸ್, ಕೋನರೆಡ್ಡಿ ಮತ್ತಿತರರು ನಿಯೋಗದಲ್ಲಿದ್ದರು.

# ಮೇ 29 ರಿಂದ ರಾಜ್ಯದಲ್ಲಿ ಮದ್ಯದಂಗಂಡಿ ಬಂದ್



**ಬೆಂಗಳೂರು, ಮೇ 25–** ನಿರಂತರ ದರ ಏರಿಕೆ ಮತ್ತು ಪರವಾನಗಿ ದರ ಹೆಚ್ಚಳ ವಿರೋಧಿಸಿ ಈ ತಿಂಗಳು 29 ರಿಂದ ಕರ್ನಾಟಕ ದಾದ್ಯಂತ ಮದ್ಯದಂಗಂಡಿ ಬಂದ್ ಮಾಡಲು ರಾಜ್ಯದ ಮದ್ಯ ಮಾರಾಟಗಾರರು ತೀರ್ಮಾನ ಮಾಡಿದ್ದಾರೆ.

ಈಗಾಗಲೇ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದ ಬಳಿಕ ಮೂರು ಬಾರಿ ಮದ್ಯದ ದರ ಏರಿಕೆ ಮಾಡಿದೆ. ಇದರಿಂದ ಹಿಂದಿನ ರೀತಿಯಲ್ಲಿ ಮದ್ಯ ಮಾರಾಟ ಆಗುತ್ತಿಲ್ಲ. ಇದೇ ಸಂದರ್ಭದಲ್ಲಿ ಮದ್ಯ ಮಾರಾಟಗಾರರ ಲೈಸೆನ್ಸ್ ಶುಲ್ಕ ದುಪ್ಪಟ್ಟು ಏರಿಕೆ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ, ಮದ್ಯ ಮಾರಾಟಗಾರರ ಸಂಘ ಸಭೆ ಕರೆದು ಸಮಾಲೋಚನೆ ನಡೆಸಿದೆ. ಮದ್ಯ ಮಾರಾಟಗಾರರು ಈ ತಿಂಗಳು 29 ರಿಂದ ಬಾರ್ ಅಂಡ್ ರೆಸ್ಟೋರೆಂಟ್, ವೈನ್ ಸ್ಟೋರ್ ಕ್ಲೋಸ್ ಮಾಡಲು ತೀರ್ಮಾನ ಮಾಡಿದ್ದಾರೆ ಎಂದು ರಾಜ್ಯ ಮದ್ಯ ಮಾರಾಟಗಾರರ ಸಂಘದ ಉಪಾಧ್ಯಕ್ಷ ಕರುಣಾಕರ್ ಹೆಗ್ಡೆ ತಿಳಿಸಿದ್ದಾರೆ.

**ಲೈಸೆನ್ಸ್ ದರ ಎಷ್ಟಿದೆ**

ಸಿಎಲ್ 9 ಬಾರ್ ಅಂಡ್ ರೆಸ್ಟೋರೆಂಟ್‌ಗೆ ಈ ಮೊದಲು ಲೈಸೆನ್ಸ್ ಶುಲ್ಕ 8,62 ಲಕ್ಷ ಇರುವುದನ್ನು 15 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಸೆಸ್ 2,25 ಲಕ್ಷ ರೂ. ಸೇರಿ ಒಟ್ಟು ಒಟ್ಟು 17,25 ಲಕ್ಷ ರೂ. ಆಗಲಿದೆ.

ಸಿಎಲ್ 6ಎ ಸ್ಟಾರ್ ಹೋಟೆಲ್ ಲೈಸೆನ್ಸ್ ಶುಲ್ಕ 9,75 ಲಕ್ಷ ಇದ್ದದ್ದು ಈಗ 20 ಲಕ್ಷ ರೂ. ಮಾಡಲಾಗಿದೆ. ಇದಕ್ಕೆ ಸೆಸ್ 3 ಲಕ್ಷ ರೂ. ಸೇರಿ ಒಟ್ಟು 23 ಲಕ್ಷ ರೂ. ಆಗಲಿದೆ.

ಸಿಎಲ್ 7 ಬೋರ್ಡಿಂಗ್ ಅಂಡ್ ಲಾಡ್ಜಿಂಗ್ ಲೈಸೆನ್ಸ್ ಶುಲ್ಕ 9,75 ಲಕ್ಷ ರೂ. ಇದ್ದದ್ದು ಈಗ 17 ಲಕ್ಷ ರೂ.ಗೆ ಏರಿಕೆಯಾಗಿದೆ. ಸೆಸ್ 2,55,000 ರೂ. ಸೇರಿ ಒಟ್ಟು 19,550,00 ರೂ. ಆಗಲಿದೆ.

26 ರಂದು ಮದ್ಯ ಮಾರಾಟಗಾರರ ಸಂಘದ ಜೊತೆಗೆ ಮಾತುಕತೆ ನಡೆಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಈ ವೇಳೆ ಮದ್ಯ ಮಾರಾಟಗಾರರ ಬೇಡಿಕೆಗಳನ್ನು ಈಡೇರಿಸಲಿಲ್ಲ ಅಂದರೆ 29 ರಿಂದ ನಿರಂತರವಾಗಿ ಮದ್ಯದ ಅಂಗಡಿಗಳನ್ನು ಕ್ಲೋಸ್ ಮಾಡಲು ರಾಜ್ಯ ಮದ್ಯ ಮಾರಾಟಗಾರರು ತೀರ್ಮಾನ ಮಾಡಿದ್ದಾರೆ.

# ನಿದ್ರಿಸುತ್ತಿದ್ದ ವ್ಯಕ್ತಿ ಕಸದ ರಾಶಿಗೆ ಸಿಲುಕಿ ಸಾವು

**ಬರೇಲಿ, ಮೇ 25–** ಮರದಡಿ ನಿದ್ದೆ ಮಾಡುತ್ತಿದ್ದ 45 ವರ್ಷ ವಯಸ್ಸಿನ ವ್ಯಕ್ತಿಯೊಬ್ಬರ ಮೇಲೆ ಪೌರ ಸಿಬ್ಬಂದಿ ಕಸದ ರಾಶಿ ಸುರಿದ ಪರಿಣಾಮ ನಿದ್ರಿಸುತ್ತಿದ್ದ ವ್ಯಕ್ತಿ ಕಸದ ರಾಶಿಯಡಿ ಸಿಲುಕಿ ಮೃತಪಟ್ಟ ಅಪರೂಪದ ಘಟನೆ ಉತ್ತರ ಪ್ರದೇಶದ ಬರೇಲಿ ನಗರದಲ್ಲಿ ನಡೆದಿದೆ.

ಬರೇಲಿ ಮಹಾನಗರ ಪಾಲಿಕೆಯ ಪೌರಕಾರ್ಮಿಕರು ಒಳಚರಂಡಿಯಿಂದ ತೆಗೆದಿದ್ದ ಹೂಳು ಮತ್ತು ಕಸವನ್ನು ಟ್ರಾಲಿಯಲ್ಲಿ ತಂದು ಸುನಿಲ್ ಕುಮಾರ್ ಪ್ರಜಾಪತಿ ಎಂಬುವವರ ಮೇಲೆ ಸುರಿದ ಪರಿಣಾಮ ಈ ದುರಂತ ಸಂಭವಿಸಿದೆ.

ತರಕಾರಿ ಮಾರಾಟ ಮಾಡಿ ಕುಟುಂಬ ನಿರ್ವಹಿಸುತ್ತಿದ್ದ ಪ್ರಜಾಪತಿ ಸ್ಥಳದಲ್ಲೇ ಮೃತಪಟ್ಟರು ಎಂದು ಕುಟುಂಬದವರು ವಿವರಿಸಿದ್ದಾರೆ. ಬರೇಲಿ ನಗರದ ಬರದಾರಿ ಪ್ರದೇಶದಲ್ಲಿ ಈ ದುರಂತ ಸಂಭವಿಸಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ಇದು ಅಸಹಜ ಸಾವು ಎನ್ನುವುದನ್ನು ಅಟಾಪ್ಸಿ ವರದಿ ದೃಢಪಡಿಸಿದೆ. ಇದು ನಿರ್ಲಕ್ಷ್ಯದ ಪ್ರಕರಣ ಎಂದು ಸರ್ಕಲ್ ಅಧಿಕಾರಿ ಪಂಕಜ್ ಶ್ರೀವಾಸ್ತವ ಹೇಳಿದ್ದಾರೆ.

ಆರಂಭಿಕ ತನಿಖೆಯ ಬಳಿಕ ನೈರ್ಮಲ್ಯ ಗುತ್ತಿಗೆದಾರ ನಯೀಮ್ ಶಾಸ್ತ್ರಿ ವಿರುದ್ಧ ಭಾರತೀಯ ನ್ಯಾಯಸಂಹಿತೆಯ ಸೆಕ್ಷನ್ 106ರ



ಅಡಿಯಲ್ಲಿ ಬರದಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ವಿವರಿಸಿದ್ದಾರೆ.

ಮೃತ ವ್ಯಕ್ತಿಯ ತಂದೆ ಗಿರ್ವಾರ್ ಸಿಂಗ್ ಪ್ರಜಾಪತಿ ಈ ಬಗ್ಗೆ ದೂರು ನೀಡಿದ್ದು, ಸ್ಮಶಾನದ ಎದುರಿನ ಮರದ ಅಡಿಯಲ್ಲಿ ಮಗ ಮಲಗಿದ್ದ ಸಂದರ್ಭದಲ್ಲಿ ಪಾಲಿಕೆಯ ಟ್ರಾಲಿ ಉದ್ದೇಶಪೂರ್ವಕವಾಗಿ ಆತನ ಮೇಲೆ ತ್ಯಾಜ್ಯವನ್ನು ಸುರಿದಿದೆ. ಪೌರಸಿಬ್ಬಂದಿ ಆ ಬಗ್ಗೆ ತಿರುಗಿಯೂ ನೋಡಿಲ್ಲ. ಈ ಜಾಗ ತ್ಯಾಜ್ಯ ಅಥವಾ ಹೂಳು ಸುರಿಯಲು ನಿಗದಿಪಡಿಸಿದ ಪ್ರದೇಶವಾಗಿರಲಿಲ್ಲ ಎಂದು ವಿವರಿಸಿದ್ದಾರೆ.

# ಕೇಂದ್ರ ಸಶಸ್ತ್ರ ಪಡೆಗಳ ಕೇಡರ್ ಪರಿಶೀಲನೆಗೆ ಸುಪ್ರೀಂ ಗಡುವು

**ನವದೆಹಲಿ, ಮೇ 25–**ಐಟಿಬಿಪಿ, ಬಿಎಸ್‌ಎಫ್, ಸಿಪಿಎಫ್, ಸಿಐಎಸ್‌ಎಫ್ ಮತ್ತು ಎಸ್‌ಎಸ್‌ಬಿ ಸೇರಿದಂತೆ ಎಲ್ಲಾ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ (ಸಿಎಪಿಎಫ್) 2021 ರಲ್ಲಿ ನಡೆಯಬೇಕಿದ್ದ ಕೇಡರ್ ಪರಿಶೀಲನೆಯನ್ನು ಆರು ತಿಂಗಳೊಳಗೆ ನಡೆಸುವಂತೆ ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ.

ಕೇಡರ್ ಪರಿಶೀಲನೆ ಮತ್ತು ಅಸ್ತಿತ್ವದಲ್ಲಿರುವ ಸೇವಾ ನಿಯಮಗಳು ಮತ್ತು ನೇಮಕಾತಿ ನಿಯಮಗಳ ಪರಿಶೀಲನೆಗೆ ಸಂಬಂಧಿಸಿದಂತೆ ಗೃಹ ಸಚಿವಾಲಯದಿಂದ ಕ್ರಮ ಕೈಗೊಂಡ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ನ್ಯಾಯಮೂರ್ತಿಗಳಾದ ಅಭಯ್ ಎಸ್ ಓಕಾ ಮತ್ತು ಉಜ್ವಲ್ ಭುಯಾನ್ ಅವರ ಪೀಠವು ಸಿಬ್ಬಂದಿ ಮತ್ತು ತರಬೇತಿ ಇಲಾಖೆಗೆ ನಿರ್ದೇಶನ ನೀಡಿದೆ.

ಐಪಿಎಸ್ ನಿಯೋಜನೆಯನ್ನು ತೆಗೆದುಹಾಕಲು ಕ್ರಿಯಾತ್ಮಕವಲ್ಲದ ಹಣಕಾಸು ಉನ್ನತೀಕರಣ, ಕೇಡರ್ ಪರಿಶೀಲನೆ ಮತ್ತು ಪುನರಚನೆ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಯನ್ನು ಕೋರಿ ಸಲ್ಲಿಸಲಾದ ಅರ್ಜಿಗಳ ಗುಂಪಿನ ಮೇಲೆ ನ್ಯಾಯಾಲಯದ ನಿರ್ದೇಶನ ಬಂದಿದೆ.

ಕೇಡರ್ ಅಧಿಕಾರಿಗಳ ಸೇವಾ ಚಲನಶೀಲತೆಯ ಅವಳಿ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು, ಒಂದೆಡೆ ನಿಶ್ಚಲತೆಯನ್ನು ತೆಗೆದುಹಾಕುವುದು ಮತ್ತು ಮತ್ತೊಂದೆಡೆ ಪಡೆಗಳ ಕಾರ್ಯಾಚರಣೆ ಮತ್ತು ಕ್ರಿಯಾತ್ಮಕ ಅಗತ್ಯವನ್ನು ನಿವಾರಿಸುವುದು, ಸಿಎಪಿಎಫ್ ಗಳ ಕೇಡರ್‌ಗಳಲ್ಲಿ ಹಿರಿಯ ಆಡಳಿತ ದರ್ಜೆಯ ಹಂತದವರೆಗೆ ನಿಯೋಜನೆಗಾಗಿ ಮೀಸಲಿಟ್ಟ ಹುದ್ದೆಗಳ ಸಂಖ್ಯೆಯನ್ನು ಎರಡು ವರ್ಷಗಳ ಹೊರಗಿನ ಮಿತಿಯೊಳಗೆ ಹಂತಹಂತವಾಗಿ ಕಡಿಮೆ ಮಾಡಬೇಕು ಎಂದು ನಾವು ಅಭಿಪ್ರಾಯಪಡುತ್ತೇವೆ.

ದೇಶದ ಗಡಿಗಳಲ್ಲಿ ಭದ್ರತೆಯನ್ನು ಕಾಪಾಡಿಕೊಳ್ಳಲು ಹಾಗೂ ಆಂತರಿಕ ಭದ್ರತಾ ಕರ್ತವ್ಯಗಳನ್ನು ನಿರ್ವಹಿಸಲು ಸಿಎಪಿಎಫ್ ಗಳ ಪಾತ್ರವು ನಿರ್ಣಾಯಕವಾಗಿದೆ ಎಂದು ನ್ಯಾಯಾಲಯ



ಹೇಳಿದೆ.ರಾಜ್ಯ ಸರ್ಕಾರಗಳು ಮತ್ತು ರಾಜ್ಯ ಪೊಲೀಸ್ ಪಡೆಗಳೊಂದಿಗೆ ಸಮನ್ವಯ ಸಾಧಿಸುವುದು ಸೇರಿದಂತೆ 'ನಿಯೋಜನೆಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳಿವೆ ಎಂದು ಅದು ಹೇಳಿದೆ.

ಸಿಎಪಿಎಫ್‌ಗಳಲ್ಲಿ ಪ್ರತಿಯೊಂದರಲ್ಲೂ ಐಪಿಎಸ್ ಅಧಿಕಾರಿಗಳ ಉಪಸ್ಥಿತಿಯು ನಿರ್ವಹಣೆಗೆ ಅತ್ಯಗತ್ಯ ಎಂದು ಕೇಂದ್ರವು ಅಭಿಪ್ರಾಯಪಟ್ಟಿದೆ ಎಂದು ನ್ಯಾಯಾಲಯ ಹೇಳಿದೆ. ವಿಶಿಷ್ಟ ಕೇಂದ್ರ ಸಶಸ್ತ್ರ ಪಡೆಯಾಗಿ ಅವರಲ್ಲಿ ಪ್ರತಿಯೊಬ್ಬರ ಪಾತ್ರ.ಇದು ನೀತಿ ನಿರ್ಧಾರ.

ಸಹಜವಾಗಿ, ಐಪಿಎಸ್ ಅಥವಾ ಐಪಿಎಸ್ ಅಧಿಕಾರಿಗಳ ಸಂಘಕ್ಕೆ ಸೇರಿದ ವೈಯಕ್ತಿಕ ಅಧಿಕಾರಿಗಳು ಡೆಪ್ಯುಟೇಶನ್ ಕೋಟಾ ಎಷ್ಟು ಇರಬೇಕು ಮತ್ತು ಡೆಪ್ಯುಟೇಶನ್ ಎಷ್ಟು ಕಾಲ ಮುಂದುವರಿಯಬೇಕು ಎಂಬುದರ ಬಗ್ಗೆ ಯಾವುದೇ ಅಭಿಪ್ರಾಯವನ್ನು ಹೊಂದಲು ಸಾಧ್ಯವಿಲ್ಲ. ಸಿಎಪಿಎಫ್ ಗಳ ಸೇವಾ ನಿಯಮಗಳು/ನೇಮಕಾತಿ ನಿಯಮಗಳ ಮೂಲಕ ಕೇಂದ್ರ ಸರ್ಕಾರವು ವ್ಯಕ್ತಪಡಿಸಿದ ನೀತಿ ನಿರ್ಧಾರದ ಕಾರಣದಿಂದಾಗಿ ಅವರು ಡೆಪ್ಯುಟೇಶನ್‌ನಲ್ಲಿದ್ದಾರೆ.

# ಇಂದಿನಿಂದ ಸಾರ್ವಜನಿಕರಿಗೆ ವಿಧಾನಸೌಧ ವೀಕ್ಷಣೆ ಭಾಗ್ಯ

**ಬೆಂಗಳೂರು, ಮೇ,25–** ರಾಜ್ಯ ವಿಧಾನಮಂಡಲದ ಇತಿಹಾಸದಲ್ಲಿಯೇ ಮೊದಲ ಬಾರಿಗೆ ವಿಧಾನಸೌಧದ ಭವ್ಯತೆಯನ್ನು ಮತ್ತು ವಿಧಾನಸಭೆಯ ಸಭಾಂಗಣ ವೀಕ್ಷಣೆಗಾಗಿ ಸಾರ್ವಜನಿಕರಿಗೆ ಅವಕಾಶ ಕಲ್ಪಿಸುವ ವಿಧಾನಸೌಧ ಗೈಡೆಡ್ ವಾಕಿಂಗ್ ಟೂರ್ ಕಾರ್ಯಕ್ರಮ ನಾಳೆ ಉದ್ಘಾಟನೆಯಾಗಲಿದೆ.



ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಪ್ರವಾಸೋದ್ಯಮ ಇಲಾಖೆ ಮತ್ತು ವಿಧಾನಸಭೆ ಸಚಿವಾಲಯದ ಸಹಭಾಗಿತ್ವದಲ್ಲಿ ಈ ಕಾರ್ಯಕ್ರಮವನ್ನು ಹಮಿಕೊಳ್ಳಲಾಗಿದೆ. ನಾಳೆ ಬೆಳಿಗ್ಗೆ 10 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮಿಕೊಂಡಿರುವ ಈ ಕಾರ್ಯಕ್ರಮದಲ್ಲಿ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ಮೊದಲಾದ ಗಣ್ಯರು ಭಾಗವಹಿಸಲಿದ್ದಾರೆ.

ವಿಧಾನಸೌಧವು ಬೆಂಗಳೂರು ನಗರದ ಆಕರ್ಷಣೀಯ ಪ್ರವಾಸಿ ತಾಣಗಳಲ್ಲಿ ಒಂದಾಗಿದ್ದು, ಇತ್ತಿ?ಚಿನ ದಿನಗಳಲ್ಲಿ ಬೆಂಗಳೂರಿಗೆ ಭೇಟಿ ನೀಡುವ ದೇಶೀಯ ಹಾಗೂ ವಿದೇಶೀಯ ಪ್ರವಾಸಿಗರು ವಿಧಾನಸೌಧಕ್ಕೆ ಭೇಟಿ ನೀಡಲು ಉತ್ಸುಕರಾಗಿದ್ದಾರೆ. ಪ್ರತಿ ಪ್ರವಾಸಿಗರು ಕಟ್ಟಡದ ಹೊರಭಾಗದಲ್ಲಿ ನಿಂತು ವೀಕ್ಷಣೆ ಮಾಡುತ್ತಿದ್ದಾರೆ.

# ಮಳೆ ಹಾನಿ ಕುರಿತ ಸಭೆಗೆ ಜೆಡಿಎಸ್‌ಗೆ ಆಹ್ವಾನವಿಲ್ಲ : ಶರವಣ ಆಕ್ಷೇಪ

**ಬೆಂಗಳೂರು,ಮೇ25–** ಮಳೆಯಿಂದ ಹಾನಿಯಾಗಿರುವ ಮತ್ತು ಗ್ರೇಟರ್ ಬೆಂಗಳೂರಿನ ಕುರಿತು ಚರ್ಚಿಸುವ ಮಹತ್ವದ ಸಭೆಗೆ ಜೆಡಿಎಸ್‌ನ ಆಹ್ವಾನ ನೀಡಿಲ್ಲ ಎಂದು ವಿಧಾನಪರಿಷತ್ ಸದಸ್ಯ ಟಿ.ಎ.ಶರವಣ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶನಿವಾರ ಮಧ್ಯಾಹ್ನ 3 ಗಂಟೆಗೆ ವಿಧಾನಸೌಧದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಸಭೆಗೆ ಜೆಡಿಎಸ್‌ನ ವಿಧಾನಪರಿಷತ್ ಸದಸ್ಯರಿಗೆ ಆಹ್ವಾನ ನೀಡಿಲ್ಲ ಎಂದು ಆಕ್ಷೇಪಿಸಿದ್ದಾರೆ.

ಸಂವಿಧಾನ ಬದ್ಧವಾಗಿ ಪ್ರಮಾಣ ವಚನ ಸ್ವೀಕರಿಸಿ ಅಧಿಕಾರದ ಚುಕ್ಕಾಣಿ ಹಿಡಿದಿರುವ ಉಪಮುಖ್ಯಮಂತ್ರಿಗಳೂ ಆಗಿರುವ ಬೆಂಗಳೂರು ಉಸ್ತುವಾರಿ ಸಚಿವರು, ಸಂವಿಧಾನ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕೆಂಬ ಸತ್ಯವನ್ನು ಮರೆತಿದ್ದಾರೆ. ಆಡಳಿತದ ಚುಕ್ಕಾಣಿ ಹಿಡಿದ ಮಾತ್ರಕ್ಕೆ ಶಿಷ್ಟಾಚಾರ ಉಲ್ಲಂಘಿಸಬಹುದೆಂಬುದು ಅವರ ನಿಲುವಾಗಿದೆಯೇ ಎಂದು ಟಿ.ಎ.ಶರವಣ ಹಾಗೂ ಜವರಾಯಿಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರೇಟರ್ ಬೆಂಗಳೂರು, ಮಳೆಹಾನಿ ಮತ್ತು ಬೆಂಗಳೂರು ಅಭಿವೃದ್ಧಿ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಬಿಜೆಪಿ ಮತ್ತು ಜೆಡಿಎಸ್‌ನ ವಿಧಾನ ಪರಿಷತ್ ಸದಸ್ಯರಿಗೆ ಆಹ್ವಾನವನ್ನೇ ನೀಡಿಲ್ಲ. ಇದರಿಂದ ಶಿಷ್ಟಾಚಾರದ ಸ್ಪಷ್ಟ ಉಲ್ಲಂಘನೆ ಜೊತೆಗೆ ವಿಧಾನ ಪರಿಷತ್‌ನ ಪ್ರತಿಪಕ್ಷ ಸದಸ್ಯರ ಹಕ್ಕಿನ ಚ್ಯುತಿ ಆಗಿದೆ ಎಂದು ಶರವಣ ಕಿಡಿಕಾರಿದ್ದಾರೆ.

ಸಭೆಯ ಆಹ್ವಾನ ಪತ್ರದಲ್ಲಿ ನಮ ಹೆಸರೇ ಇಲ್ಲ. ಕೆಲವು



ದಿನಗಳ ಹಿಂದೆ ಜೆಡಿಎಸ್ ಶಾಸಕಾಂಗ ಪಕ್ಷದ ನಿಯೋಗ ಬೆಂಗಳೂರಿನ ವಿವಿಧಡೆ ಮಳೆ ನೀರಿನಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ ಜನರ ಅಹವಾಲು ಸ್ವೀಕರಿಸಿ ಮುಂದೆ ಕರೆಯುವ ಸಭೆಯಲ್ಲಿ ಚರ್ಚಿಸುವ ಬಗ್ಗೆ ತೀರ್ಮಾನಿಸಿದೆವು. ಇದು ಅಧಿಕಾರದ ದುರ್ಬಳಕೆ ಮತ್ತು ಸ್ವೇಚ್ಛಾಚಾರ ವರ್ತನೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸಭೆಯಲ್ಲಿ ತಾರತಮ್ಯ ಎಸಗಿರುವುದು ಸ್ಪಷ್ಟವಾಗಿ ಗೊತ್ತಾಗುತ್ತೆ. ವಿಧಾನ ಪರಿಷತ್‌ನ ಕಾಂಗ್ರೆಸ್ ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದನ್ನು ವಿಧಾನಪರಿಷತ್‌ನ ಸಭಾಪತಿ ಬಸವರಾಜ ಹೊರಟ್ಟಿ ಅವರ ಗಮನಕ್ಕೆ ತಂದು ಹಕ್ಕುಚ್ಯುತಿ ಸಮಿತಿಗೆ ಒಪ್ಪಿಸುವ ಬಗ್ಗೆ ದೂರು ನೀಡುವುದಾಗಿ ಅವರು ಹೇಳಿದ್ದಾರೆ.

# ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಕೇರಳಕ್ಕೆ ಮುಂಗಾರು ಪ್ರವೇಶ

**ನವದೆಹಲಿ,ಮೇ,25–** ಈ ವರ್ಷ ಕೇರಳದಲ್ಲಿ ಕಳೆದ 16 ವರ್ಷಗಳ ಬಳಿಕ ನಿಗದಿತ ಸಮಯಕ್ಕಿಂತ ಬೇಗ ಆರಂಭವಾಗುತ್ತಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕೊನೆಯ ಬಾರಿಗೆ 2009 ಮತ್ತು 2001 ರಲ್ಲಿ ರಾಜ್ಯದಲ್ಲಿ ಮುಂಗಾರು ಮಳೆ ನಿಗದಿತ ಸಮಯಕ್ಕಿಂತ ಬೇಗ ಕಾಣಿಸಿಕೊಂಡಿತ್ತು. ಮುಂದಿನ 24 ಗಂಟೆಗಳಲ್ಲಿ ರಾಜ್ಯದಲ್ಲಿ ಮೊದಲ ಮಳೆ ಕಾಣಸಿಕೊಳ್ಳುವ ನಿರೀಕ್ಷೆ ಇದೆ ಎಂದು ಹೇಳಲಾಗಿದೆ. ಸಾಮಾನ್ಯವಾಗಿ ಕೇರಳಕ್ಕೆ ಮುಂಗಾರು ಮಳೆ ಬರುವ ದಿನಾಂಕ ಜೂನ್ 1. ಆದಾಗ್ಯೂ, ಮೊದಲು ದಾಖಲಾದ ದಿನಾಂಕ 1918 ರ ಮೇ 11 ರಂದು ಆಗಿತ್ತು. ಮತ್ತೊಂದೆಡೆ, ತಡವಾಗಿ ಮಳೆ ಬಂದ ದಾಖಲೆ 1972 ರಲ್ಲಿತ್ತು, ಆಗ ಜೂನ್ 18 ರ ಹೊತ್ತಿಗೆ ಮಳೆ ಪ್ರಾರಂಭವಾಗಿತ್ತು.

ಕಳೆದ 25 ವರ್ಷಗಳಲ್ಲಿ, ಅತ್ಯಂತ ವಿಳಂಬವಾದ ಆಗಮನ 2016 ರಲ್ಲಿ ಸಂಭವಿಸಿತ್ತು ಜೂನ್ 9 ರಂದು ಮುಂಗಾರು ಕೇರಳವನ್ನು ಪ್ರವೇಶಿಸಿತ್ತು ಎಂದು ದಕ್ಷಿಣ ರಾಜ್ಯಗಳಲ್ಲಿ, ಭಾರತ ಹವಾಮಾನ ಇಲಾಖೆ ತಿಳಿಸಿದೆ.

ಕೇರಳ, ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡು, ಕೊಂಕಣ ಮತ್ತು ಗೋವಾದಲ್ಲಿ ಅತಿ ಹೆಚ್ಚು ಮಳೆಯಾಗುವ ಮುನ್ಸೂಚನೆ ನೀಡಿದೆ.

ಮೇ 29 ರವರೆಗೆ ಕೇರಳ ಮತ್ತು ಕರಾವಳಿ ಕರ್ನಾಟಕದಾದ್ಯಂತ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಗಂಟೆಗೆ 40–50 ಕಿ.ಮೀ ವೇಗದಲ್ಲಿ ಗಾಳಿ ಬೀಸಲಿದೆ. ಮುಂದಿನ ಐದು ದಿನಗಳಲ್ಲಿ ತಮಿಳುನಾಡು, ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿ ಚದುರಿದ ಮಳೆ ಮತ್ತು ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮಹಾರಾಷ್ಟ್ರದ ಕರಾವಳಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿ ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಹವಾಮಾನ ವರದಿಯ ಪ್ರಕಾರ, ಮುಂಬೈನಲ್ಲಿ ಗುಡುಗು ಸಹಿತ ಮಳೆಯಾಗಬಹುದು, ಕೆಲವು ಪ್ರದೇಶಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗಬಹುದು ಮತ್ತು ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸಬಹುದು ಎಂದು ತಿಳಿಸಿದೆ.

ಯಾದಗಿರಿ ಹಾಗೂ ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ಮೈಸೂರು, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ರಾಮನಗರ, ತುಮಕೂರು, ವಿಜಯನಗರ ಗುಡುಗು ಸಹಿತ ಮಳೆ ಸಾಧ್ಯತೆ ಇದೆ.

ಮೇ 25ರಂದು ಕರಾವಳಿ ಜಿಲ್ಲೆಗಳು, ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಬೆಳಗಾವಿ, ಧಾರವಾಡ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಾಗಲಕೋಟೆ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ ಹಾಗೂ ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು ಚಾಮರಾಜನಗರ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಕೋಲಾರ, ಚಿಕ್ಕಬಳ್ಳಾಪುರ, ಮೈಸೂರು, ಮಂಡ್ಯ ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ತುಮಕೂರು, ವಿಜಯನಗರ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ.

ಮೇ 26ರಂದು ಕರಾವಳಿ ಜಿಲ್ಲೆಗಳು, ಉತ್ತರ ಒಳನಾಡಿನ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಯಾದಗಿರಿ, ರಾಯಚೂರು, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಯಾದಗಿರಿ, ರಾಯಚೂರು, ಧಾರವಾಡ, ಕಲಬುರಗಿ, ಬೀದರ್, ಗದಗ, ಹಾವೇರಿ, ಕೊಪ್ಪಳ ಹಾಗೂ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಮೈಸೂರು, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಚಾಮರಾಜನಗರ ಜಿಲ್ಲೆಗಳಲ್ಲಿ ಭಾರಿ ಮಳೆ ಸಾಧ್ಯತೆ ಇದೆ.

ಮೇ 27 ಮತ್ತು 28ರಂದು ಕರಾವಳಿ ಜಿಲ್ಲೆಗಳು, ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಬಾಗಲಕೋಟೆ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ, ಹಾಗೂ ದಕ್ಷಿಣ ಒಳನಾಡಿನ ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ.

ವಿಜಯನಗರ, ಬೆಂಗಳೂರು ಗ್ರಾಮೀಣ, ಬೆಂಗಳೂರು ನಗರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಚಾಮರಾಜನಗರ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ಹಾಸನ, ಮಂಡ್ಯ, ಮೈಸೂರು, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಹೆಚ್ಚಿನ ಸ್ಥಳಗಳಲ್ಲಿ ಸಾಧಾರಣ ಮಳೆ/ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಯುವ ಮಾರ್ಗ

ಭಾನುವಾರ : 25-05-2025

# ಮಾದಿಗ ಎಂದು ಬರೆಸಿ ಸರ್ಕಾರಿ ಸೌಲಭ್ಯ ಪಡೆಯಿರಿ: ಹೆಚ್.ಆಂಜನೇಯ



**ಬೀದರ:ಮೇ.25–** ಪ್ರತಿಯೊಬ್ಬ ಮಾದಿಗ ಸಮಾಜದ ಜನರು ನಿಮ್ಮ ಮನೆಗೆ ಜಾತಿ ಜನಗಣತಿಗಾಗಿ ಅಧಿಕಾರಿಗಳು ಬಂದಾಗ ತಪ್ಪದೇ ಮಾದಿಗ ಎಂದು ಬರೆಸಬೇಕು. 35 ವರ್ಷಗಳ ಹೋರಾಟಕ್ಕಿಂತ ಈ ಮೇ ತಿಂಗಳ ಸಮೀಕ್ಷೆ ನಮ್ಮ ಭವಿಷ್ಯ ಬರೆಯುವ ತಿಂಗಳಾಗಿದೆ. ನಮ್ಮ ಬದುಕನ್ನು ಕಟ್ಟಿಕೊಳ್ಳುವ ತಿಂಗಳಾಗಿದೆ. ಆದ್ದರಿಂದ ತಪ್ಪದೇ ಪ್ರತಿಯೊಬ್ಬರೂ ಜಾತಿ ಜನಗಣತಿಯಲ್ಲಿ ಪಾಲ್ಗೊಂಡು, ಮನೆಮನೆಗೆ ತೆರಳಿ ನಮ್ಮ ಸಮಾಜದವರಿಗೆ ಜಾಗೃತಿ ಮೂಡಿಸಿ ಮುಂದಿನ ದಿನಗಳಲ್ಲಿ ಸರ್ಕಾರಿ ಸೌಲಭ್ಯ ಪಡೆಯಿರಿ ಎಂದು ಮಾಜಿ ಸಚಿವ ಹೆಚ್ ಆಂಜನೇಯ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಮುಂದಿನ ದಿನಗಳಲ್ಲಿ ನಮ್ಮ ಸಮಾಜದವರಿಗೆ ಸರ್ಕಾರದಿಂದ ಆರ್ಥಿಕ ಸಹಾಯ, ನಿಗಮ ಮಂಡಳಿಯಿಂದ ಧನಸಹಾಯ, ಶೈಕ್ಷಣಿಕ ಸಹಾಯಕ್ಕಾಗಿ ನಿಮ್ಮ ನಿಮ್ಮ ಜಾತಿಯನ್ನು ತಪ್ಪದೇ ನಮೂದಿಸಿ. ಈ ಸಮೀಕ್ಷೆ ಮುಖಾಂತರ ನ್ಯಾ. ನಾಗಮೋಹನದಾಸ ಅವರು ನಮಗೆ ನ್ಯಾಯ ಒದಗಿಸಿಕೊಡುತ್ತಾರೆ ಎನ್ನುವ ಭರವಸೆ ನಮಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಸಾಮಾಜಿಕ ನ್ಯಾಯದ ಹರಿಕಾರರಾದ ಕಾರಣ ನಮಗೆ ಅವರೇ ಅಂಬೇಡ್ಕರ್ ಇದ್ದಂತೆ ಎಂದು ಪ್ರತಿಪಾದಿಸಿದರು.

ಮುಂದುವರೆದು ಮಾತನಾಡಿದ ಹೆಚ್ ಆಂಜನೇಯ ಅವರು ಇಂದಿನ ಜಾತಿ ಜನಗಣತಿಯಲ್ಲಿ ಕೆಲವು ನಕಲಿ ಜಾತಿಗಳು ಸೇರಿಕೊಳ್ಳುತ್ತಿವೆ. ಬೇಡಜಂಗಮ ಎಂಬುದು ವೀರಶೈವ ಲಿಂಗಾಯತದಲ್ಲಿ ಬರುತ್ತದೆ. ಹೀಗಾಗಿ ಬೇಡಜಂಗಮ ಬರೆಸಿದವರ ಬಗ್ಗೆ ಪರಿಶೀಲನೆ ನಡೆಸುವಂತೆ ಸಿಎಂ ಅವರಿಗೆ ತಿಳಿಸಿದ್ದೇನೆ. ಈ ಹಿಂದೆಯೂ ಬೇಡಜಂಗಮ ಪ್ರಮಾಣ ಪತ್ರ ನೀಡಿದ ಅಧಿಕಾರಿಗಳಿಗೆ ನೇರವಾಗಿ ಜೈಲಿಗೆ ಕಳುಹಿಸುವಂತೆ ಸಿಎಂ ಅವರಿಗೆ ಮನವಿ ಮಾಡಿಕೊಳ್ಳುತ್ತೇನೆ ಎಂದು ತಿಳಿಸಿದರು. ಔರಾದ ಬಿ. ಮೀಸಲು ಕ್ಷೇತ್ರದ ಶಾಸಕರಾದ ಪ್ರಭು ಚವ್ಹಾಣ ಅವರು ನಾಲ್ಕು ಬಾರಿ ನಕಲಿ ಜಾತಿ ಪ್ರಮಾಣ ಪತ್ರ ಪಡೆದುಕೊಂಡು ರಾಜಕೀಯ ಲಾಭ ಪಡೆದುಕೊಂಡಿದ್ದಾರೆ. ಅವರ ವಿರುದ್ಧ ಹೋರಾಟ ಮಾಡಿ ಕ್ರಮ ಕೈಗೊಳ್ಳುವ ಕುರಿತು ಅಧಿಕಾರಿಗಳ ಜೊತೆ ಚರ್ಚಿಸುತ್ತೇನೆ ಎಂದರು.

ಇದೇ ವೇಳೆ ಪ್ರಮುಖರಾದ ವಿಜಯಕುಮಾರ ಜಿ. ರಾಮಕೃಷ್ಣ, ಚಂದ್ರಕಾಂತ ಹಿಪ್ಪಳಗಾಂವ, ರಾಜು ಕಡ್ಯಾಳ, ವಿಜಯಕುಮಾರ ಕೌಡ್ಯಾಳ, ದೇವದಾಸ ಚಿಂತಲಗೇರಾ, ಕಲಪ್ಪ ವೈದ್ಯ, ಶಾಮಣ್ಣ ಬಂಬುಳಗಿ, ದೇವದಾಸ ತುಮಕುಂಟೆ, ರಮೇಶ ಕಟ್ಟಿತುಗಾಂವ, ಕಮಲಾಕರ ಹೆಗಡೆ, ಸುಧಾಕರ ಕೊಳ್ಳೂರ, ಪಿಟೀರ ಶ್ರೀಮಂಡಲ್, ಜೀವನ ರಿಕ್ಕೆ, ಶಿವಣ್ಣ ಹಿಪ್ಪಳಗಾಂವ, ಹರೀಶ ಗಾಯಕವಾಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜೂ.1 ರಂದು ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ

ಯುವ ಮಾರ್ಗ ಸುದ್ದಿ



**ಮಾನ್ವಿ,ಮೇ.25–**ಪಟ್ಟಣದ ವಾಸವಿ ಕಲ್ಯಾಣ ಮಂಟಪದಲ್ಲಿ ಜೂ.1 ರಂದು ಬೆಳಿಗ್ಗೆ 10.30 ಕ್ಕೆ ಶ್ರೀನಗರೇಶ್ವರ ಆರ್ಯವೈಶ್ಯ ಸಂಘದ ವತಿಯಿಂದ 2024–25 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಪದವಿ ಹಾಗೂ ಸ್ನಾತಕೋತ್ತರ ಪದವಿ ಅಂತಿಮ ವರ್ಷದ ಪರೀಕ್ಷೆಗಳಲ್ಲಿ ಶೇ 70 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಮಾನ್ವಿ ತಾಲೂಕಿನ ಆರ್ಯವೈಶ್ಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಕಾರ್ಯಕ್ರಮದ ಸಾನಿಧ್ಯವನ್ನು ಚೀಕಲಪರ್ವಿ ಮಠದ ಶ್ರೀಸದಾಶಿವ ಮಹಾಸ್ವಾಮಿಗಳು ವಹಿಸಲಿದ್ದು ಸಂಸದ ಜಿ.ಕುಮಾರನಾಯಕ, ಸಚಿವರಾದ ಎನ್.ಎಸ್.ಬೋಸರಾಜು,ಶಾಸಕ ಹಂಪಯ್ಯನಾಯಕ,ಆಗಮಿಸಲಿದ್ದಾರೆ. ಮಾನ್ವಿಯ ಮಯೂರಿ ನೃತ್ಯ ಕಲಾ ತಂಡದ ಕಲಾವಿದರಿಂದ ಭರತನಾಟ್ಯ ನೃತ್ಯ ಪ್ರದರ್ಶನ ನಡೆಯಲಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಆರ್ಯವೈಶ್ಯ ಸಮುದಾಯದವರು ಭಾಗವಹಿಸಬೇಕು ಹಾಗೂ ಮಾನ್ವಿ ತಾಲೂಕಿನ ಆರ್ಯವೈಶ್ಯ ವಿದ್ಯಾರ್ಥಿಗಳು ಮೇ.26 ರೋಳಗಾಗಿ ತಮ್ಮ ಹೆಸರು, ಅಂಕಪಟ್ಟಿ ಸೇರಿದಂತೆ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವಂತೆ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ತಾ.ಅಧ್ಯಕ್ಷರಾದ ಆರ್.ಮುತ್ತುರಾಜ್ ಶೆಟ್ಟಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ರಾಜ್ಯದ 21,000 ಸರ್ಕಾರಿ ಶಾಲೆಗಳ ಕೊಠಡಿಗಳು ಶಿಥಿಲ




**ಬಳ್ಳಾರಿ, ಮೇ.25–** ಸರ್ಕಾರಿ ಶಾಲೆಗಳನ್ನು ಉಳಿಸಿ, ಬೆಳೆಸಬೇಕೆಂದು ಎಐಡಿಎಓ ವಿದ್ಯಾರ್ಥಿ ಸಂಘಟನೆ ವತಿಯಿಂದ ಬಳ್ಳಾರಿ ರೈಲು ನಿಲ್ದಾಣ ಮುಂದೆ ಸಾರ್ವಜನಿಕರಿಂದ ಸಹಿ ಸಂಗ್ರಹಣ ಅಭಿಯಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಎಐಡಿಎಓ ರಾಜ್ಯ ಖಜಾಂಚಿಗಳು ಸುಭಾಷ್ ಬೆಟ್ಟದ ಕೊಪ್ಪ ಅವರು ಮಾತನಾಡಿ ರಾಜ್ಯದಲ್ಲಿ ಒಟ್ಟು 46,755 ಸರ್ಕಾರಿ ಶಾಲೆಗಳು ಇವೆ, ಅದರಲ್ಲಿ 21,255 ಶಾಲೆಗಳು ಕಟ್ಟಡಗಳು ಶಿಥಿಲಗೊಂಡು ಅಪಾಯದಲ್ಲಿವೆ, ಇದರಲ್ಲಿ ಬಳ್ಳಾರಿಯ 171 ಶಾಲೆಗಳು ಇದೆ. ಹಲವು ವರ್ಷಗಳಿಂದ ದುರಸ್ತಿ ಕಾಣದ ಶಾಲೆಗಳ ಚಾವಣಿ ಕುಸಿದು ಮಕ್ಕಳು ಗಾಯಗೊಂಡಿರುವುದು, ಪ್ರಾಣ ಕಳೆದುಕೊಂಡಿರುವುದಂತೂ ಹೃದಯವಿದ್ರಾವಕ, ಬಳ್ಳಾರಿ ತಾಲೂಕಿನ ಶಂಕರ ಬಂಡೆ ಗ್ರಾಮದ ಓರ್ವ ಎಂಟನೇ ತರಗತಿ ವಿದ್ಯಾರ್ಥಿನಿ, ಶಾಲೆಯ ಚಾವಣಿ ಕುಸಿದು ಗಾಯಗೊಂಡು ನಂತರ ಸಾವಿಗೀಡಾಗಿದ್ದು ಅತ್ಯಂತ ನೋವಿನ ಘಟನೆಯಲ್ಲೊಂದು. ಈ ಘಟನೆ ರಾಜ್ಯದಲ್ಲಿನ ಶಾಲೆಗಳ ಶೋಚನೀಯ ಪರಿಸ್ಥಿತಿಗೆ ಕನ್ನಡಿ ಹಿಡಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರಿ ಶಾಲೆಗಳು "ಬಡಮಕ್ಕಳ ಶಿಕ್ಷಣದ ಆಶಾಕಿರಣ", ಕೋಟ್ಯಂತರ "ವಿದ್ಯಾರ್ಥಿಗಳ ಭವಿಷ್ಯದ ಅಡಿಪಾಯ!!" ಈ ಶಾಲೆಗಳಿಗೆ ಶಿಕ್ಷಣದ ಕನಸು ಹೊತ್ತು ಬರುವವರು ಬಹುತೇಕ ಬಡವರ, ರೈತ –ಕಾರ್ಮಿಕರ ಮಕ್ಕಳು. ಅಂತಹ ನಮ್ಮ ಸರ್ಕಾರಿ ಶಾಲೆಗಳ ಇಂದಿನ ಪರಿಸ್ಥಿತಿ ಬಹಳ ಶೋಚನೀಯ ಹಾಗೂ ಚಿಂತಾಜನಕವಾಗಿದೆ.ಸರ್ಕಾರಗಳು ಮೂಲಭೂತ ಸೌಕರ್ಯಗಳನ್ನು ಒದಗಿಸದೆ, ಕಟ್ಟಡಗಳನ್ನು ದುರಸ್ತಿ ಮಾಡದೆ, ಶಿಕ್ಷಕರ ನೇಮಕಾತಿ ಮಾಡದೆ ,ದಾಖಲಾತಿ ಕಡಿಮೆ ಎಂಬ ನೆಪವೊಡ್ಡಿ 6,000 ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವುದು ಖಂಡನೀಯ. ರಾಜ್ಯ ಸರ್ಕಾರ ಹಾಗೂ ಶಿಕ್ಷಣ ಸಚಿವರು ಪೋಷಕರು ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸುತ್ತಿಲ್ಲ ಎಂಬ ಮಾತನ್ನು ಹೇಳಿ, ಖಾಸಗಿ ಶಾಲೆಗಳಿಗೆ ಪರವಾನಗಿ ಕೊಟ್ಟು, ಸರ್ಕಾರಿ ಶಾಲೆಗಳ ಅಭಿವೃದ್ಧಿ ಮಾಡುವ ಜವಾಬ್ದಾರಿಯಿಂದ ನುಣುಚಿ ಕೊಳ್ಳುತ್ತಿರುವುದನ್ನು ಎಐಡಿಎಓ ವಿದ್ಯಾರ್ಥಿ ಸಂಘಟನೆ ತೀವ್ರವಾಗಿ ಖಂಡಿಸುತ್ತದೆ. ಇದೆ ತಿಂಗಳು 29ರಂದು ಶಾಲೆಗಳು ಶುರುವಾಗಲಿ ದೆ, ಈ ಬಾರಿ ಹೆಚ್ಚು ಮಳೆ ಆಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಹಾಗೂ ಶಿಕ್ಷಣ ಸಚಿವರು ಈ ಕೂಡಲೇ ಕಾರ್ಯ ಪ್ರವೃತ್ತರಾಗಿ ಶಿಥಿಲಗೂಂಡಿರುವ ಸರ್ಕಾರಿ ಶಾಲೆಗಳ ಕಟ್ಟಡಗಳನ್ನು ತ್ವರಿತವಾಗಿ ದುರಸ್ತಿ ಮಾಡಿಸಬೇಕು ಮತ್ತು ಅಗತ್ಯ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.

# ಬಿಜೆಪಿಗರು ಗೋಬೇಲ್ಸ್ ರೀತಿ: ಪ್ರಿಯಾಂಕ್ ಖರ್ಗೆ ಟೀಕೆ

**ಕಲಬುರಗಿ,ಮೇ.25–**ಹಿಟ್ಲರ್ ಕಾಲದಲ್ಲಿ ಗೋಬೇಲ್ಸ್ ಎಂಬುವವನಿದ್ದ, ಅವನು ಈಗ ಬಿಜೆಪಿಗರ ರೂಪದಲ್ಲಿ ಪುನರಾವತಾರ ಪಡೆದಿದ್ದಾನೆ ! ಗಂಟೆಗೊಂದು ಸುಳ್ಳು, ಗಳಿಗೆಗೊಂದು ಬಣ್ಣ, ಇವು ಬಿಜೆಪಿಯವರು ಹುಟ್ಟಿನಿಂದಲೇ ಮೈಗೂಡಿಸಿಕೊಂಡು ಬಂದ ಗುಣ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದ್ದಾರೆ.

"ನಾನು ಗಾದೆಮಾತು ಹೇಳಿದೆ, ಬಸವಣ್ಣನವರ ವಚನ ಹೇಳಿದೆ, ಅವರೇಕೆ ನನಗೆ ಹೇಳಿದರು ಎಂದುಕೊಳ್ಳಬೇಕು" ಎನ್ನುವ ಮನುವಾದಿ ನಾರಾಯಣಸ್ವಾಮಿಯವರು ಹೇಳಿದ್ದಾರೆ. ನಾರಾಯಣಸ್ವಾಮಿಯವರೇ, ಗೋಸುಂಬೆಗೂ ನಿಮಗೂ ಬಣ್ಣ ಬದಲಿಸುವ ಕಾಂಪಿಟೇಶನ್ ಇಟ್ಟರೆ ಗೆಲುವು ನಿಮ್ಮದೇ! ಮೊದಲು ಪ್ರಿಯಾಂಕ್ ಖರ್ಗೆಯೇ ಬೊಗಳುವ ನಾಯಿ ಎಂದಿರಿ, ನಂತರ ಇದಕ್ಕೆ ವಿಷಾಧಿಸುತ್ತೇನೆ ಎಂದಿರಿ, ಆ ನಂತರ ನಾನು ಯಾವುದೇ ಕಾರಣಕ್ಕೂ ಕ್ಷಮೆ ಕೇಳುವುದಿಲ್ಲ ಎಂದಿರಿ, ತದನಂತರ "ನಾನು ಗಾದೆ ಹೇಳಿದೆ, ಅವರು ನನಗೇ ಹೇಳಿದರು ಎಂದು ಭಾವಿಸಿಕೊಂಡಿದ್ದಾರೆ" ಎನ್ನುತ್ತಿರುವಿರಿ. ಒಂದೊಂದು ಹೊತ್ತಿಗೆ ಒಂದೊಂದು ಮಾತನಾಡುವ ನಾರಾಯಣಸ್ವಾಮಿಯವರೇ, ನಿಮಗೆ ನಾಲಿಗೆ ಹಿಡಿತದಲ್ಲಿಲ್ಲವೇ ಅಥವಾ ಬುದ್ಧಿಯೇ ಹಿಡಿತದಲ್ಲಿಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ಬಾಬಾ ಸಾಹೇಬರ ಸೋಲಿಗೆ ಸಾವರ್ಕರ್ ಕಾರಣ ಎಂಬುದಕ್ಕೆ ದಾಖಲೆ ನೀಡಿದರೆ ರಾಜೀನಾಮೆ ಕೊಡುತ್ತೇನೆ ಎಂದಿದ್ದಿರಿ, ನಾನು ದಾಖಲೆ ನೀಡಿದ್ದಕ್ಕೆ ಹತಾಶೆ, ಕೋಪ ಒಟ್ಟಿಗೆ ಸೇರಿ ತಮ್ಮ ಬಾಯಿಯಿಂದ ಈ ಬೈಗುಳಗಳು ಉದುರುತ್ತಿವೆಯೇ? ಮಲ್ಲಿಕಾರ್ಜುನ ಖರ್ಗೆಯವರಿಗೆ ಹಾಗೂ ಪ್ರಿಯಾಂಕ್ ಖರ್ಗೆಯೆಡೆಗೆ ತೂರುವ ಒಂದೊಂದು ಬೈಗುಳವೂ ನಿಮ್ಮ ಕುರ್ಚಿಯ ಭದ್ರತೆಗೆ ಒಂದೊಂದು ಮೊಳೆ ಹೊಡೆದಂತೆ, ಬಿಜೆಪಿಯಲ್ಲಿ ನಿಮ್ಮ ಅಸ್ತಿತ್ವ ಇರುವುದೇ ನಮಗೆ ಬೈಯ್ಯುವುದರಲ್ಲಿ, ಬೈಯ್ಯುವುದಕ್ಕಾಗಿಯೇ ಬಿಜೆಪಿ ನಿಮ್ಮನ್ನು ಇಟ್ಟುಕೊಂಡಿದೆ ಎಂಬ ಸತ್ಯ ಎಂಬುದು ನಮಗೆ ತಿಳಿದಿದೆ! ಸ್ಪಷ್ಟವಾಗಿ ನನ್ನ ಹೆಸರನ್ನೇ ಬಳಸಿ ನಾಯಿ ಎಂದಿರುವ ತಾವು ಈಗ "ಅವರೇ ಭಾವಿಸಿಕೊಂಡಿದ್ದಾರೆ" ಎನ್ನುತ್ತಿದ್ದೀರಲ್ಲ, ಈ ಹಸಿಹಸಿಯಾದ ಸುಳ್ಳು ಹೇಳುವುದಕ್ಕೆ ಆರ್‌ಎಸ್‌ಎಸ್ ಕಚೇರಿಯಲ್ಲಿ ಎಷ್ಟು ದಿನ ಟ್ರೈನಿಂಗ್ ಪಡೆದಿದ್ದೀರಿ ? ನಾರಾಯಣಸ್ವಾಮಿಯವರ ಮಾತಿಗೆ ಗೋಣಾಡಿಸುವ ಬಿ.ವೈ.ವಿಜಯೇಂದ್ರ ಅವರೇ, ಆರ್.ಅಶೋಕ ಅವರೇ, ನಾಯಿ ಎಂಬ ನಿಂಧನೆಗೆ ನಿಮ್ಮ ಹಾಗೂ ನಿಮ್ಮ ಪಕ್ಷದ ಅನುಮೋದನೆ ಇದೆಯೇ ? ಇಂತಹ ಕೀಳು ಸಂಸ್ಕೃತಿಯ ರಾಜಕಾರಣಕ್ಕೆ ನಿಮ್ಮ ಸಹಮತ ಇದೆಯೇ ? ನಾಳೆಯಿಂದ ನಿಮಗೆ ಹಾಗೂ ನಿಮ್ಮ ನಾಯಕರಿಗೆ ನಾಯಿ, ನರಿ, ಹಂದಿ ಎಂಬಂತಹ ಪದಗಳಿಂದ ಕರೆದರೆ ತಾವು ಸಂತೋಷದಿಂದ ಸ್ವೀಕರಿಸುತ್ತೀರಾ ? ಕೊನೆಯದಾಗಿ ಬಿಜೆಪಿಯ ಕರ್ನಾಟಕ ನಾಯಕರು ಒಂದೇ ಒಂದು ಪ್ರಶ್ನೆಗೆ ಉತ್ತರಿಸಲಿ, ಸುಳ್ಳಿನಿಂದ ಬಿಜೆಪಿ ಹುಟ್ಟಿತಾ ಅಥವಾ ಬಿಜೆಪಿಯಿಂದಲೇ ಸುಳ್ಳು ಹುಟ್ಟಿತಾ ? ಎಂದಿದ್ದಾರೆ.



# ಸಮರ್ಪಕ ಬೀಜ, ಗೊಬ್ಬರ ಪೂರೈಕೆಗೆ ಆಗ್ರಹ

**ಕುಂದಗೋಳ,ಮೇ.25–** ಕುಂದಗೋಳ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ನಡೆದ ರೈತರು ಮತ್ತು ಅಗ್ರೋ ಕೇಂದ್ರದ ಮಾಲೀಕರ ಸಭೆಯಲ್ಲಿ ರೈತರಿಗೆ ಬೀಜ, ಗೊಬ್ಬರ, ರಾಸಾಯನಿಕಗಳನ್ನು ಪೂರೈಸುವ ಅಗ್ರೋ ಕೇಂದ್ರಗಳು ಅಧಿಕ ಮೊತ್ತ ಪಡೆದು ಕೃಷಿ ವಸ್ತುಗಳನ್ನು ನೀಡಬಾರದು ಎಂಬ ಅನೇಕ ರೈತರ ಆಗ್ರಹ ಕೇಳಿಬಂದು ಅಗ್ರೋ ಕೇಂದ್ರದ ಮಾಲೀಕರು ಹಾಗೂ ರೈತರ ಮಧ್ಯೆ ಗೊಂದಲ–ಗದ್ದಲಗಳು ನಡೆದವು.

ರೈತರು ಆಗ್ರಹ ವ್ಯಕ್ತಪಡಿಸುತ್ತ ನಮಗೆ ಬೇಕಾದ ಗೊಬ್ಬರ ಮಾರುವಾಗ ನೀವು ನಮ್ಮಿಂದ ಹೆಚ್ಚಿನ ಹಣ ಪಡೆಯುತ್ತೀರಿ, ಅಲ್ಲದೆ ಒಂದು ವಸ್ತುವಿನೊಂದಿಗೆ ಮತ್ತೊಂದು ವಸ್ತು ನೀಡಿ ಅಧಿಕ ಹಣ ಸರಿದೂಗಿಸುತ್ತೀರಿ. ಮತ್ತು ಕಳಪೆ ಬೀಜ ಮಾರಾಟ ಮಾಡುವುದು ಸರಿಯಲ್ಲ. ಅಂತವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಕೃಷಿಕ ಸಮಾಜದ ತಾಲೂಕಾಧ್ಯಕ್ಷ ಎ.ಎಂ.ಕಟಗಿ ಅವರು ಮಾತನಾಡಿ ರೈತರ ನಿಲುವನ್ನು ಅರ್ಥ ಮಾಡಿಕೊಂಡು ಸಾಗೋಣ, ನಿಮ್ಮ ಕಷ್ಟ–ನಷ್ಟ ಕುರಿತು ಚರ್ಚಿಸಿ ಬಗೆಹರಿಸಿಕೊಳ್ಳಿ ಎಂದರು.ನವದೆಹಲಿ ರತ್ನ ಭಾರತ ಸಮಾಜ ಅಧ್ಯಕ್ಷ ಹೇಮನಗೌಡ ಬಸವನಗೌಡ್ರ ಮಾತನಾಡಿ ನಿಮಗೆ ನಷ್ಟ ಆಗುವುದಾದರೆ ಸರ್ಕಾರದೊಂದಿಗೆ ಮಾತನಾಡಿಕೊಳ್ಳಿರಿ. ಆದರೆ ನಮ್ಮ ರೈತರಿಗೆ ಯಾವುದೇ ರೀತಿ ಹೊರೆಯಾಗಬಾರದು. ಅದರಂತೆ ಕಳಪೆ ಬೀಜಗಳನ್ನು ಮಾರಾಟ ಮಾಡಿ ರೈತರನ್ನು ಕಷ್ಟಕ್ಕೆ ನೂಕಬಾರದು. ಒಂದು ವೇಳೆ ಹೀಗಾದರೆ ನಿಮ್ಮ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಎಚ್ಚರಿಸಿದರು.

ಸಹಾಯಕ ಕೃಷಿ ನಿರ್ದೇಶಕಿ ಭಾರತಿ ಮೆಣಸಿನಕಾಯಿ ಅವರು ಮಾತನಾಡಿ ಇದುವರೆಗೂ ರೈತರ ಬೇಡಿಕೆ ಆಲಿಸಿದ್ದು, ಅವರಿಗೆ ನಾವು ಸ್ಪಂದಿಸುತ್ತೇವೆ ಎಂದರು.

# ನೆರೆಹಾವಳಿ, ಪ್ರವಾಹ ಎದುರಿಸಲು ಸಜ್ಜಾಗಿ : ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ

**ಕಲಬುರಗಿ: ಮೇ.25–** ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾದಾಗ ನೆರೆಹಾವಳಿ, ಪ್ರವಾಹ, ಹಾಗೂ ಮನೆಹಾನಿಯಾದ ಸಂದರ್ಭದಲ್ಲಿ ಅಧಿಕಾರಿಗಳು ತುರ್ತಾಗಿ ಪರಿಹಾರ ನೀಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಹೇಳಿದರು.

ಶುಕ್ರವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಲಬುರಗಿ ಜಿಲ್ಲೆಯಲ್ಲಿ 2025–26 ನೇ ಸಾಲಿನ ಪೂರ್ವ/ಮುಂಗಾರು ಮಳೆ ಅವಧಿಯ ಪೂರ್ವ ಸಿದ್ಧತೆ ಹಾಗೂ ಮುಂಜಾಗ್ರತೆ ಕ್ರಮಗಳು ಕೈಗೊಳ್ಳುವ ಬಗ್ಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಪ್ರಕೃತಿ ವಿಕೋಪಗಳು ಸಂಭಾವಿಸಿದ್ದ ಸಂದರ್ಭದಲ್ಲಿ ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್ ನವರು ತ್ವರಿತವಾಗಿ ಸಾರ್ವಜನಿಕ ರಕ್ಷಣೆಗಾಗಿ ಧಾವಿಸಬೇಕು ಎಂದರು.ಭೀಮಾನದಿಯ ಉಜಯನಿ ಡ್ಯಾಂ ನಿಂದ ನೀರು ಬಿಟ್ಟಾಗಿ ಹೆಚ್ಚಿನ ಪ್ರಮಾಣ ಒಳಹರಿವು ಉಂಟಾಗುತ್ತದೆ ಅಧಿಕಾರಿಗಳು ಎಚ್ಚತ್ತುಗೊಂಡು ಕೆಲಸ ನಿರ್ವಹಿಸಬೇಕು ಪ್ರತಿದಿನ ನೀರಿನ ಪ್ರಮಾಣವನ್ನು ಚಕ್ ಮಾಡಿ ಏನೆ ತೊಂದರೆಗಳು ಇದ್ದರೆ ಅದನ್ನು ಸರಿಪಡಿಸಲು ಸೂಚನೆ ನೀಡಿದರು.

153 ಹಳ್ಳಿಗಳಿಗೆ ಸಮಸ್ಯೆಯಾಗುವ ಸಂಭವ ಇರುತ್ತದೆ ಇದಕ್ಕಾಗಿ ಎಲ್ಲ ಗ್ರಾಮ ಪಂಚಾಯಿತಿಗಳಿಗೆ ತುರ್ತು ಅಗತ್ಯ ಸೇವೆಗಳ ಮಾಹಿತಿ ನೀಡಲು ಸಹಾಯವಾಣಿ ಸಂಖ್ಯೆಯನ್ನು ಪ್ರತಿಯೊಂದು ಗ್ರಾಮ ಪಂಚಾಯತಿಗೆ ನೀಡಬೇಕೆಂದು ಹೇಳಿದರು.

ಜಾಕ್‌ವ್ಲ್‌ಗಳನ್ನು ಪರಿಶೀಲಿಸಬೇಕು ಹಾಗೂ ಕೆರೆ ನೀರಿನ ಏರು ಇಳಿತವನ್ನು ಪರೀಕ್ಷೆ ಮಾಡಬೇಕು ಯಾವುದೇ ಸಾರ್ವಜನಿಕರಿಗೆ ಹಾನಿಯಾಗದಂತೆ ಕ್ರಮಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಳೆಗಾಲ ಕಾರಣದಿಂದ ಭೀಮಾನದಿಯ ಒಳಹರಿವಿನ ಹೆಚ್ಚಳವಿರುವ ಕಾರಣದಿಂದ ಯಾವುದೇ ಅನಾಹುತ ಸಂಭವಿಸಿದಂತೆ ತಾಲೂಕಕ್ಕೆ ಒಬ್ಬ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಮತ್ತು ನಾಲ್ಕು ದಿನಗಳಲ್ಲಿ ತಾಲೂಕು ಟಾಸ್ಕಫೋರ್ಸ ಸಭೆಯನ್ನು ಮಾಡಿ ಮುಂದೆ ಸಂಭವಿಸಬಹುದಾದ ಅನಾಹುತಗಳ ಮುಂಜಾಗೃತ ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿಗಳ ಕಚೇರಿಗೆ ಮಾಹಿತಿಯನ್ನು ನೀಡಬೇಕೆಂದರು ಮಳೆಗಾಲದಲ್ಲಿ ನದಿ ತಟದಲ್ಲಿರುವ ಗ್ರಾಮಗಳಿಗೆ ವಿಶೇಷ ಗಮನಹರಿಸಬೇಕು ಸಾರ್ವಜನಿಕರಿಗೆ ಅರಿವು ಮೂಡಿಸಲು ಡಂಗುರ ಹಾಗೂ ಜಾಗೃತಿ ಮೂಡಿಸುವ ಕೆಲಸಗಳನ್ನು ಮಾಡಬೇಕು. ನೀರಿನ ಅಭಾವ ಆಗದಂತೆ ನೋಡಿಕೊಳ್ಳಬೇಕು ಎಂದರು.




ವಿಶೇಷವಾಗಿ ಮಳೆಗಾಲದಲ್ಲಿ ನೀರು ಕಲುಷಿತಗೊಳ್ಳುವುದರಿಂದ ಹಲವಾರು ಸಾಂಕ್ರಾಮಿಕ ರೋಗಗಳಾದ ಟೈಫಡ್, ಮಲೇರಿಯಾ ಡೆಂಗ್ಯೂ ಪ್ರಕರಣಗಳು ಹೆಚ್ಚಿನ ಸಂಕ್ರಾಮಿಕ ರೋಗಗಳು ಹರಡುವ ಸಂಭವಿರುವ ಕಾರಣದಿಂದ ಆರೋಗ್ಯ ಇಲಾಖೆ ಹೆಚ್ಚಿನ ಗಮನ ಹರಿಸಿ ಕ್ರಮಕೈಗೊಳ್ಳಬೇಕು. ಎಂದು ಜಿಲ್ಲಾ ಅರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಖ್ಯಾತನಾಳ ಅವರಿಗೆ ಸೂಚನೆ ನೀಡಿದರು.

ಡೆಂಗ್ಯೂ ಪ್ರಕರಣಗಳ ಸಂಖ್ಯೆಯನ್ನು ಕಡಿಮೆ ಮಾಡಲು ರೋಗಿಗಳಿಗೆ ಸಮಯಕ್ಕೆ ಸರಿಯಾದ ಚಿಕಿತ್ಸೆ ನೀಡಲು ಸರ್ಕಾರಿ ಆಸ್ಪತ್ರೆಗಳಲ್ಲಿ ಬೆಗಳು ಕಾಯ್ದಿರಿಸಬೇಕು ಸಕಾಲಕ್ಕೆ ಚಿಕಿತ್ಸೆ ನೀಡಲು ಸೂಚಿಸಿದರು. ರೈತರಿಗೆ ಮಳೆಗಾಲ ವಿರುವ ಕಾರಣದಿಂದ ಕೃಷಿ ಚಟುವಟಿಕೆ ಅಗತ್ಯವಿರುವ ಕಾರಣ ದಿಂದ ಬಿತ್ತನೆ ಬೇಕಾದ ಬೀಜ ರಸಗೊಬ್ಬರ ಗಳು ಕೃಷಿ ಉಪಕರಣಗಳು ಮತ್ತು ಕೀಟನಾಶಕಗಳನ್ನು ಪರಿಶೀಲಿಸಿ ಕ್ರಮಕೈಗೊಂಡು ರೈತರಿಗೆ ಸುಲಭ ದರದಲ್ಲಿ ಸಿಗುವಂತೆ ನೀಡಬೇಕೆಂದರು.

ಕಲಬುರಗಿ ಕೆಲವೊಂದು ವಾರ್ಡಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ವ್ಯತ್ಯಯ ಸಂಭವಿಸುತ್ತಿದ್ದು, ಸಾರ್ವಜನಿಕ ಸಹಾಯವಾಣಿಗೆ ಕಂಟ್ರೋಲ್ ರೂಂ ಸ್ಥಾಪಿಸಿ ಸಂಬಂಧಪಟ್ಟ ಅಧಿಕಾರಿಗಳು ಸಾರ್ವಜನಿಕರು ಸಹಾಯವಾಣಿಯ ಸಂಖ್ಯೆಯನ್ನು ನೀಡಿ ಸಾರ್ವಜನಿಕರ ಸಮಸ್ಯಗಳಿಗೆ ತಕ್ಷಣವಾಗಿ ಸ್ಪಂಧಿಸಬೇಕು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಜೂನ್ ತಿಂಗಳಲ್ಲಿ ಶಾಲಾ ಕಾಲೇಜುಗಳು ಆರಂಭವಾಗುವುದರಿಂದ ಹೆಚ್ಚಿನ ಮಳೆಯಾಗುವ ಸಂಭವ ಇರುವುದರಿಂದ ಇಲ್ಲವಾದಲ್ಲಿ ಪರ್ಯಾಯ ವ್ಯವಸ್ಥೆ ಮಾಡುವ ಮುಖಾಂತರ ಸಂಭವಿಸುವ ಅನಾಹುತಗಳನ್ನು ತಪ್ಪಿಸಬೇಕು. ಶಾಲಾ ಕಾಲೇಜ್ ಮೇಲ್ಛಾವಣೆ ಮತ್ತು ಅಂಗನವಾಡಿ ಕಟ್ಟಡಗಳ ಮೇಲ್ಛಾವಣೆ ಕುಸಿಯುವ ಸಂಭವ ಇರುವುದರಿಂದ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತೆ ಕ್ರಮವಾಗಿ ಕಟ್ಟಡಗಳ ಸ್ಥಳಾಂತರ ಮಾಡಲು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶ ಸೂರ್ಯಕಾಂತ ಮದಾನೆ ಅವರಿಗೆ ಸೂಚನೆ ನೀಡಿದರು.

ಬಾಲಕಾರ್ಮಿಕರನ್ನು ಪತ್ತೆ ಹಚ್ಚಿ ಅವರನ್ನು ಶಾಲೆ ಕರೆತರಲು ಬಾಲಕಾರ್ಮಿಕ ಅಧಿಕಾರಿಯನ್ನು ಸೂಚನೆ ನೀಡಿದರು. ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ವಿದ್ಯಾರ್ಥಿಗಳನ್ನು ವಿದ್ಯಾರ್ಥಿಗಳಿಗೆ ಶಿಕ್ಷಣದ ಅರಿವನ್ನು ಮೂಡಿಸುವುದರ ಮುಖಾಂತರ ಶಾಲೆಗೆ ಬರುವಂತೆ ಎಲ್ಲಾ ಅಧಿಕಾರಿಗಳು ಕಾರ್ಯನಿರ್ವಹಿಸಬೇಕೆಂದುಹೇಳಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ್ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹೇಶ ಮೇಗಣ್ಣನವರ್ ಮತ್ತು ಕೃಷಿ ಇಲಾಖೆ ಜಂಟಿ ನಿರ್ದೇಶಕ ಸಮದ್ ಪಟೇಲ್, ಡಿಯುಡಿಸಿ ಯೋಜನಾ ನಿರ್ದೇಶಕ ಮುನ್ವಾರ ದೌಲಾ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಸಂತೋಷ ಇನಾಂದಾರ, ಡಿ.ಹೆಚ್.ಓ. ಡಾ. ಶರಣಬಸಪ್ಪ ಖ್ಯಾತನಾಳ, ಸೇರಿದಂತೆ ಜಿಲ್ಲಾ ಸಮಟ್ಟದ ಅಧಿಕಾರಗಳು ಉಪಸ್ಥಿತರಿದ್ದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**